ಸತ್ಯ ಮತ್ತು ಧೈರ್ಯದ ಧ್ವನಿ

# ತುಂಗ ಬಿಂಬ

TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923




ಸಂಪುಟ: 04 Vol: | ಸಂಚಿಕೆ: 119 Issue: | ರಾಯಚೂರು Raichur | 21-10-2026 | ಬುಧವಾರ Wednesday | ಪುಟ: 04 Page: | ಬೆಲೆ: ₹ 2.00 Price: | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ | Editor: Gururaja K 98863 85685

## ಮೋಹನ್ ಭಾಗವತ್ ವಿಜಯದಶಮಿ ಭಾಷಣಕ್ಕೆ ಪ್ರಧಾನಿ ಮೋದಿ ಮೆಚ್ಚುಗೆ: ರಾಷ್ಟ್ರ ನಿರ್ಮಾಣಕ್ಕೆ ಪಂಚ ಪರಿವರ್ತನೆಯ ಮಹತ್ವ



ನವದೆಹಲಿ: ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್ ಎಸ್) ಸರಸಂಘಚಾಲಕ ಡಾ. ಮೋಹನ್ ಭಾಗವತ್ ಅವರು ವಿಜಯದಶಮಿ ಅಂಗವಾಗಿ ನೀಡಿದ ಭಾಷಣವನ್ನು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದು, ರಾಷ್ಟ್ರೀಯ ಪ್ರಗತಿ, ಸಾಮಾಜಿಕ ಸಾಮರಸ್ಯ, ಸ್ವಾವಲಂಬನೆ ಹಾಗೂ ವ್ಯಕ್ತಿತ್ವ ನಿರ್ಮಾಣಕ್ಕೆ ಸಂಬಂಧಿಸಿದ ಅವರ ವಿಚಾರಗಳು ಅತ್ಯಂತ ಸ್ಫೂರ್ತಿದಾಯಕವಾಗಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪ್ರತಿಕ್ರಿಯಿಸಿರುವ ಪ್ರಧಾನಿ ಮೋದಿ, ನಾಗ್ಪುರದಲ್ಲಿ ಆರ್‌ಎಸ್‌ಎಸ್ ಶತಮಾನೋತ್ಸವದ ಹಿನ್ನೆಲೆಯಲ್ಲಿ ನಡೆದ ವಿಜಯದಶಮಿ ಕಾರ್ಯಕ್ರಮದಲ್ಲಿ ಮೋಹನ್ ಭಾಗವತ್ ಅವರು ದೇಶದ ಅಭಿವೃದ್ಧಿ ಮತ್ತು ಸಮಾಜದ ಸರ್ವತೋಮುಖ ಪ್ರಗತಿಗೆ ಅಗತ್ಯವಾದ ಹಲವು ಮಹತ್ವದ ವಿಷಯಗಳನ್ನು ಪ್ರಸ್ತಾಪಿಸಿದ್ದಾರೆ ಎಂದು ತಿಳಿಸಿದ್ದಾರೆ.

ರಾಷ್ಟ್ರೀಯ ಪ್ರಗತಿ, ಸಾಮಾಜಿಕ ಏಕತೆ, ಸ್ವಾವಲಂಬನೆ, ಸಾಮಾಜಿಕ ಸಬಲೀಕರಣ ಹಾಗೂ ವ್ಯಕ್ತಿತ್ವ ನಿರ್ಮಾಣದ ಕುರಿತು ಭಾಗವತ್ ಅವರು ವ್ಯಕ್ತಪಡಿಸಿದ ಅಭಿಪ್ರಾಯಗಳು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತವೆ. ವಿಶೇಷವಾಗಿ ಸೇವಾ ಮನೋಭಾವ ಮತ್ತು ರಾಷ್ಟ್ರ ನಿರ್ಮಾಣದ ಕಾರ್ಯಗಳಲ್ಲಿ ಸ್ವಯಂಸೇವಕರ ಪಾತ್ರದ ಕುರಿತು ಅವರು ನೀಡಿದ ಸಂದೇಶ ಗಮನಾರ್ಹವಾಗಿದೆ ಎಂದು ಮೋದಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಆರ್‌ಎಸ್‌ಎಸ್ ಸ್ವಯಂಸೇವಕರ ಜೀವನದಲ್ಲಿ ಸೇವೆ ಮತ್ತು ರಾಷ್ಟ್ರಹಿತಕ್ಕೆ ವಿಶೇಷ ಸ್ಥಾನವಿದೆ. ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಪ್ರತಿಯೊಬ್ಬರೂ ತಮ್ಮ ಜವಾಬ್ದಾರಿಯನ್ನು ಅರಿತು ಕಾರ್ಯನಿರ್ವಹಿಸಬೇಕು ಎಂಬ ಭಾಗವತ್ ಅವರ ಆಶಯವು ರಾಷ್ಟ್ರದ ಪ್ರಗತಿಗೆ ಪೂರಕವಾಗಿದೆ ಎಂದು ಪ್ರಧಾನಿ ಅಭಿಪ್ರಾಯಪಟ್ಟಿದ್ದಾರೆ.

ನಾಗ್ಪುರದಲ್ಲಿ ನಡೆದ ವಾರ್ಷಿಕ ವಿಜಯದಶಮಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಮೋಹನ್ ಭಾಗವತ್ ಅವರು, ದೇಶದ ಅಭಿವೃದ್ಧಿ ಕೇವಲ ಆರ್ಥಿಕ ಬೆಳವಣಿಗೆಗೆ ಸೀಮಿತವಾಗಿರದೆ ಸಾಮಾಜಿಕ ಸಾಮರಸ್ಯ, ಸಾಂಸ್ಕೃತಿಕ ಮೌಲ್ಯಗಳು, ಕುಟುಂಬ ವ್ಯವಸ್ಥೆ ಮತ್ತು ನಾಗರಿಕರ ಜವಾಬ್ದಾರಿಯುತ ನಡವಳಿಕೆಯನ್ನೂ ಒಳಗೊಂಡಿರಬೇಕು ಎಂದು ಪ್ರತಿಪಾದಿಸಿದರು.

ದೇಶದ ಪ್ರತಿಯೊಬ್ಬ ನಾಗರಿಕನಲ್ಲಿಯೂ ಸ್ವದೇಶಿ ಉತ್ಪನ್ನಗಳ ಬಳಕೆ, ಪರಿಸರ ಸಂರಕ್ಷಣೆ, ಸಾಮಾಜಿಕ ಒಗ್ಗಟ್ಟು ಹಾಗೂ ರಾಷ್ಟ್ರೀಯ ಏಕತೆಯ ಬಗ್ಗೆ ಜಾಗೃತಿ ಮೂಡಬೇಕಿದೆ. ಸಮಾಜದ ವಿವಿಧ ವರ್ಗಗಳ ನಡುವೆ ಪರಸ್ಪರ ವಿಶ್ವಾಸ ಮತ್ತು ಸಹಕಾರ ಹೆಚ್ಚಾದಾಗ ಮಾತ್ರ ಸುಸ್ಥಿರ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂಬ ಸಂದೇಶವನ್ನು ಅವರು ನೀಡಿದರು.

ಇದೇ ಸಂದರ್ಭದಲ್ಲಿ ಸಮಾಜದಲ್ಲಿ ಸಕಾರಾತ್ಮಕ ಪರಿವರ್ತನೆ ತರಲು ಆರ್ ಎಸ್‌ಎಸ್ ಪ್ರತಿಪಾದಿಸಿರುವ ಪಂಚ ಪರಿವರ್ತನ ಪರಿಕಲ್ಪನೆಯ ಮಹತ್ವವನ್ನು ಭಾಗವತ್ ವಿವರಿಸಿದರು. 2ನೇ ಪುಟಕ್ಕೆ

## ದುರ್ಗಾಷ್ಟಮಿ ಅಂಗವಾಗಿ ಶ್ರೀ ಮಂಚಾಲಮ್ಮ ದೇವಿಗೆ ವಿಶೇಷ ಸುಗಂಧ ದ್ರವ್ಯಾಭಿಷೇಕ



ಮಂತ್ರಾಲಯ: ಶರನ್ನವರಾತ್ರಿ ಮಹೋತ್ಸವದ ಪವಿತ್ರ ದುರ್ಗಾಷ್ಟಮಿ ಅಂಗವಾಗಿ ಮಂತ್ರಾಲಯದ ಶ್ರೀಮಠದಲ್ಲಿ ಶ್ರೀ ಮಂಚಾಲಮ್ಮ ದೇವಿಗೆ ಪರಮಪೂಜ್ಯ ಶ್ರೀಗಳು ವಿಶೇಷ ಸುಗಂಧ ದ್ರವ್ಯಾಭಿಷೇಕ ನೆರವೇರಿಸಿ, ಲೋಕಕಲ್ಯಾಣಕ್ಕಾಗಿ ಪ್ರಾರ್ಥಿಸಿದರು.

ದುರ್ಗಾಷ್ಟಮಿಯ ವಿಶೇಷ ಪೂಜಾ ಕೈಂಕರ್ಯದ ಅಂಗವಾಗಿ ಶ್ರೀ ಮಂಚಾಲಮ್ಮ ದೇವಿಗೆ ವಿವಿಧ ಸುಗಂಧ ದ್ರವ್ಯಗಳಿಂದ ಅಭಿಷೇಕ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಎಸ್‌ಜಿಎಸ್ ವಿದ್ಯಾಪೀಠದ ಪಂಡಿತರು ಹಾಗೂ ವಿದ್ಯಾರ್ಥಿಗಳು ವೇದಮಂತ್ರಗಳು ಮತ್ತು ದುರ್ಗಾಸೂಕ್ತವನ್ನು ಪಠಿಸಿದರು. ವೇದಘೋಷಗಳ ನಡುವೆ ನಡೆದ ಅಭಿಷೇಕ ಹಾಗೂ ವಿಶೇಷ ಪೂಜಾ ವಿಧಿವಿಧಾನಗಳು ಧಾರ್ಮಿಕ ವಾತಾವರಣಕ್ಕೆ ಮತ್ತಷ್ಟು ಮೆರುಗು ನೀಡಿದವು.

ನವರಾತ್ರಿ ಉತ್ಸವವು ಶಕ್ತಿ ಆರಾಧನೆಯ ಪ್ರಮುಖ 2ನೇ ಪುಟಕ್ಕೆ

## ಧಾರ್ಮಿಕ ಕಾರ್ಯಕ್ರಮಗಳಿಂದ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ವೃದ್ಧಿ: ಎನ್.ಎಸ್. ಬೋಸರಾಜು



ರಾಯಚೂರು: ಧಾರ್ಮಿಕ ಕಾರ್ಯಕ್ರಮಗಳು ಜನರಲ್ಲಿ ಭಕ್ತಿಭಾವ ಮೂಡಿಸುವುದರ ಜೊತೆಗೆ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಪರಸ್ಪರ ಪ್ರೀತಿ, ವಿಶ್ವಾಸವನ್ನು ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಮಾಜಿ ಸಚಿವ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಅಭಿಪ್ರಾಯಪಟ್ಟರು.

ನಗರದಲ್ಲಿ ಶರನ್ನವರಾತ್ರಿ ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಮಾತಾ ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಧಾರ್ಮಿಕ ಆಚರಣೆಗಳು ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಪ್ರತೀಕವಾಗಿವೆ. ಇಂತಹ ಕಾರ್ಯಕ್ರಮಗಳು ಜನರನ್ನು ಒಗ್ಗೂಡಿಸುವುದರೊಂದಿಗೆ ಸಮಾಜದಲ್ಲಿ ಸಾಮರಸ್ಯ ಮತ್ತು ಸಹಬಾಳ್ವೆಯ ಸಂದೇಶವನ್ನು ಸಾರುತ್ತವೆ ಎಂದರು.

ಹಬ್ಬಗಳು ಕೇವಲ ಧಾರ್ಮಿಕ ಆಚರಣೆಗಳಿಗೆ ಸೀಮಿತವಾಗದೆ ಜನರಲ್ಲಿ ಮಾನವೀಯ ಮೌಲ್ಯಗಳು, ಸಹೋದರತ್ವ ಹಾಗೂ ಪರಸ್ಪರ ಗೌರವವನ್ನು ಬೆಳೆಸುವಂತಾಗಬೇಕು. ಹಿರಿಯರು ಉಳಿಸಿಕೊಂಡು ಬಂದಿರುವ ಸಾಂಸ್ಕೃತಿಕ ಮತ್ತು ಧಾರ್ಮಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಶ್ರೀ ಈಶ್ವರ ದೇವಸ್ಥಾನಕ್ಕೆ ಭೇಟಿ ನೀಡಿದ ಬೋಸರಾಜು ಅವರು ವಿಶೇಷ ಪೂಜೆ ಸಲ್ಲಿಸಿ, ನಾಡಿನ ಸಮಸ್ತ ಜನತೆಗೆ ಒಳಿತಾಗಲಿ, ಎಲ್ಲರ ಬದುಕಿನಲ್ಲಿ ಸುಖ, ಶಾಂತಿ ಹಾಗೂ ಸಮೃದ್ಧಿ ನೆಲೆಸಲಿ ಎಂದು ಪ್ರಾರ್ಥಿಸಿದರು. 2ನೇ ಪುಟಕ್ಕೆ

## ಆಯುಧ ಪೂಜೆ ಮೂಲಕ ಶ್ರಮದ ಮಹತ್ವ ಸಾರಿದ ಬೋವಿ ಸಮಾಜ: ಶಾಸಕ ಬಸನಗೌಡ ದದ್ದಲ್



ರಾಯಚೂರು, ಅ.20: ದುಡಿಮೆಯನ್ನೇ ಬದುಕಿನ ಆಧಾರವಾಗಿಸಿಕೊಂಡಿರುವ ಬೋವಿ ಸಮಾಜವು ತನ್ನ ಸಾಂಪ್ರದಾಯಿಕ ವೃತ್ತಿಗೆ ಬಳಸುವ ಉಪಕರಣಗಳನ್ನು ಪೂಜಿಸುವ ಮೂಲಕ ಶ್ರಮ ಸಂಸ್ಕೃತಿಯನ್ನು ಉಳಿಸಿಕೊಂಡು ಬರುತ್ತಿದೆ ಎಂದು ರಾಯಚೂರು ಗ್ರಾಮೀಣ ಶಾಸಕ ಬಸನಗೌಡ ದದ್ದಲ್ ಹೇಳಿದರು.

ನಗರದ ಆಶಾಪೂರ ರಸ್ತೆಯಲ್ಲಿರುವ ಶ್ರೀ ಸಿದ್ಧರಾಮೇಶ್ವರ ಮೂರ್ತಿ ವೃತ್ತದಲ್ಲಿ ಬೋವಿ ಸಮಾಜದ ವತಿಯಿಂದ ಆಯೋಜಿಸಿದ್ದ ಆಯುಧ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಪೂಜೆ ಸಲ್ಲಿಸಿದ ಬಳಿಕ ಅವರು ಮಾತನಾಡಿದರು.

ತಲೆಮಾರುಗಳಿಂದ ಕಠಿಣ ಪರಿಶ್ರಮದ ಮೂಲಕ ಬದುಕು ಕಟ್ಟಿಕೊಂಡಿರುವ ಬೋವಿ ಸಮಾಜವು ದುಡಿಮೆಗೆ ವಿಶೇಷ ಗೌರವ ನೀಡುತ್ತಾ ಬಂದಿದೆ. ನವರಾತ್ರಿ ಉತ್ಸವದ ಅಂಗವಾಗಿ ಆಚರಿಸುವ ಆಯುಧ ಪೂಜೆಯು ಕೇವಲ ಧಾರ್ಮಿಕ ಆಚರಣೆಯಲ್ಲ, ದುಡಿಮೆಯ ಸಾಧನಗಳ ಬಗ್ಗೆ ಕೃತಜ್ಞತೆ ವ್ಯಕ್ತಪಡಿಸುವ ವಿಶಿಷ್ಟ ಸಂಪ್ರದಾಯವಾಗಿದೆ ಎಂದು ತಿಳಿಸಿದರು.

ಕಲ್ಲು ಒಡೆಯುವುದು ಸೇರಿದಂತೆ ಶ್ರಮದಾಯಕ ವೃತ್ತಿಗಳಲ್ಲಿ ತೊಡಗಿರುವ ಬೋವಿ ಸಮಾಜದ ಜನರು ತಮ್ಮ ಕಾಯಕಕ್ಕೆ ಬಳಸುವ ಉಪಕರಣಗಳನ್ನು ಪೂಜಿಸಿ, ವೃತ್ತಿಯಲ್ಲಿ ಯಶಸ್ಸು ಹಾಗೂ ಕುಟುಂಬದ ಏಳಿಗೆಗಾಗಿ ಪ್ರಾರ್ಥಿಸುತ್ತಾರೆ. ಇಂತಹ ಆಚರಣೆಗಳು ಶ್ರಮದ ಘನತೆಯನ್ನು ಎತ್ತಿಹಿಡಿಯುವುದರ ಜೊತೆಗೆ 2ನೇ ಪುಟಕ್ಕೆ

## ಔಷಧಿ ಅಂಗಡಿಗಳ ಸಹಕಾರದೊಂದಿಗೆ ನಕಲಿ ವೈದ್ಯರಿಂದ ಚಿಕಿತ್ಸೆ: ಡಾ. ನಂದಿತಾ ಎಂ.ಎನ್. ಆತಂಕ



ರಾಯಚೂರು: ಜಿಲ್ಲೆಯಲ್ಲಿ ಅಧಿಕೃತ ವೈದ್ಯಕೀಯ ವಿದ್ಯಾರ್ಹತೆ ಇಲ್ಲದೆ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿರುವ ನಕಲಿ ವೈದ್ಯರ ವಿರುದ್ಧ ಆರೋಗ್ಯ ಇಲಾಖೆ ನಿರಂತರ ದಾಳಿ ನಡೆಸಿ ಎಫ್‌ಐಆರ್ ದಾಖಲಿಸುತ್ತಿದೆ. ಆದರೆ ಕೆಲವು ಔಷಧಿ ಅಂಗಡಿಗಳ ಮಾಲೀಕರು ನಕಲಿ ವೈದ್ಯರಿಗೆ ತಮ್ಮ ಅಂಗಡಿಗಳ ಒಳಭಾಗ ಹಾಗೂ ಹಿಂಭಾಗದಲ್ಲಿ ಪ್ರತ್ಯೇಕ ವ್ಯವಸ್ಥೆ ಕಲ್ಪಿಸಿ ಚಿಕಿತ್ಸೆ ನೀಡಲು ಅವಕಾಶ ಮಾಡಿಕೊಡುತ್ತಿರುವುದು ದಾಳಿಯ ವೇಳೆ ಬೆಳಕಿಗೆ ಬಂದಿದ್ದು, ಇದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ನಂದಿತಾ ಎಂ.ಎನ್. ತಿಳಿಸಿದ್ದಾರೆ.

ಮಾನ್ವಿ ತಾಲೂಕಿನ ಬಾಗಲವಾಡ ಗ್ರಾಮದಲ್ಲಿ ನಕಲಿ ವೈದ್ಯರ ವಿರುದ್ಧ ನಡೆಸಿದ ದಾಳಿಯ ಸಂದರ್ಭದಲ್ಲಿ ಸ್ಥಳೀಯ ಲಕ್ಷ್ಮೀ ಮೆಡಿಕಲ್ ಶಾಪ್‌ನ ಒಳಭಾಗದಲ್ಲಿ ಕ್ಲಿನಿಕ್ ನಡೆಸುತ್ತಿರುವುದು ಪತ್ತೆಯಾಗಿದೆ. ಸಂಬಂಧಪಟ್ಟ ವ್ಯಕ್ತಿಯ ವೈದ್ಯಕೀಯ ದಾಖಲಾತಿಗಳನ್ನು ಪರಿಶೀಲಿಸಿದಾಗ ಯಾವುದೇ ಅಧಿಕೃತ ವೈದ್ಯಕೀಯ ಪದವಿ ಹೊಂದಿಲ್ಲದಿರುವುದು ಕಂಡುಬಂದಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

ಸಾರ್ವಜನಿಕರಿಗೆ ಅರ್ಹ ವೈದ್ಯರು ಸೂಚಿಸಿದ ಔಷಧಿಗಳನ್ನು ನಿಯಮಾನುಸಾರ ಮಾರಾಟ ಮಾಡಬೇಕಾದ ಔಷಧಿ ಅಂಗಡಿಗಳಲ್ಲಿಯೇ ಅನಧಿಕೃತವಾಗಿ ಕ್ಲಿನಿಕ್‌ಗಳನ್ನು ನಡೆಸುತ್ತಿರುವುದು ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಗಂಭೀರ ವಿಷಯವಾಗಿದೆ. ವೈದ್ಯಕೀಯ ವಿದ್ಯಾರ್ಹತೆ ಇಲ್ಲದ ವ್ಯಕ್ತಿಗಳು ರೋಗಿಗಳಿಗೆ ಚಿಕಿತ್ಸೆ ನೀಡುವುದರಿಂದ ತಪ್ಪು ರೋಗನಿರ್ಣಯ, ಸೂಕ್ತವಲ್ಲದ ಔಷಧಿಗಳ ಬಳಕೆ ಹಾಗೂ ಆರೋಗ್ಯ ಸಮಸ್ಯೆಗಳು ಉಲ್ಬಣಿಸುವ ಅಪಾಯವಿದೆ ಎಂದು ಎಚ್ಚರಿಸಿದ್ದಾರೆ.

ಕೆಲವು ಔಷಧಿ ಅಂಗಡಿಗಳ ಪರವಾನಗಿದಾರರು ತಮ್ಮ ಅಂಗಡಿಗಳನ್ನು ಅನಧಿಕೃತವಾಗಿ ಬೇರೆಯವರಿಗೆ ನಡೆಸಲು ಅವಕಾಶ ನೀಡುತ್ತಿರುವುದು ಕಂಡುಬರುತ್ತಿದೆ. ಇಂತಹ ಸಂದರ್ಭಗಳಲ್ಲಿ ಔಷಧಿ ಅಂಗಡಿ ನಡೆಸುವವರೇ ವೈದ್ಯಕೀಯ ಅರ್ಹತೆ ಇಲ್ಲದೆ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿರುವ ಪ್ರಕರಣಗಳು ಗಮನಕ್ಕೆ ಬರುತ್ತಿವೆ ಎಂದು ತಿಳಿಸಿದ್ದಾರೆ.

ಜಿಲ್ಲೆಯ ವಿವಿಧೆಡೆ ಔಷಧಿ ಅಂಗಡಿಗಳಲ್ಲಿ ನಕಲಿ ವೈದ್ಯರು ಚಿಕಿತ್ಸೆ ನೀಡುತ್ತಿರುವ ಕುರಿತು ಮಾಹಿತಿ ಲಭ್ಯವಾಗುತ್ತಿದೆ. ಆದ್ದರಿಂದ ಔಷಧಿ ಅಂಗಡಿಗಳಿಗೆ ಪರವಾನಗಿ ನೀಡುವ ಔಷಧ ನಿಯಂತ್ರಣ ಇಲಾಖೆಯ ಅಧಿಕಾರಿಗಳು ನಿಯಮಿತವಾಗಿ ಖುದ್ದು ಪರಿಶೀಲನೆ ನಡೆಸಬೇಕು. ಪರವಾನಗಿ ನಿಯಮಗಳ ಉಲ್ಲಂಘನೆ ಹಾಗೂ ಅನಧಿಕೃತ ವೈದ್ಯಕೀಯ ಚಟುವಟಿಕೆಗಳು ಕಂಡುಬಂದಲ್ಲಿ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಡಾ. ನಂದಿತಾ 2ನೇ ಪುಟಕ್ಕೆ

## ಈಶಾನ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರ ಎ. ವಸಂತಕುಮಾರ ಮತಯಾಚನೆ



ರಾಯಚೂರು: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆ ಹಿನ್ನೆಲೆಯಲ್ಲಿ ಕೆಪಿಸಿಸಿ ಕಾರ್ಯಾಧ್ಯಕ್ಷ, ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಉಸ್ತುವಾರಿ ಹಾಗೂ ವಿಧಾನ ಪರಿಷತ್ ಸದಸ್ಯ ಎ. ವಸಂತಕುಮಾರ ಅವರು ರಾಯಚೂರು ವೈದ್ಯಕೀಯ ವಿಜ್ಞಾನ ಸಂಸ್ಥೆಗೆ ಭೇಟಿ ನೀಡಿ, ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರ ಮತಯಾಚನೆ ನಡೆಸಿದರು.

ಸಂಸ್ಥೆಯ ಶಿಕ್ಷಕ ಮತದಾರರನ್ನು ಭೇಟಿಯಾಗಿ ಮಾತನಾಡಿದ ಅವರು, ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡುವಂತೆ ಮನವಿ ಮಾಡಿದರು.

ಶರಣಪ್ಪ ಮಟ್ಟೂರು ಅವರು ಶಿಕ್ಷಕರ ಸಮಸ್ಯೆಗಳ ಪರಿಹಾರ ಹಾಗೂ ಅವರ ಹಕ್ಕುಗಳ ರಕ್ಷಣೆಗಾಗಿ ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಶಿಕ್ಷಕರು ಮತ್ತು ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಸಮಸ್ಯೆಗಳ ಕುರಿತು ಅವರಿಗೆ ಸಮಗ್ರ ಅರಿವಿದ್ದು, ಹಂತ ಹಂತವಾಗಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸಲಿದ್ದಾರೆ ಎಂದು ವಸಂತಕುಮಾರ ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರವು ಕಲ್ಯಾಣ ಕರ್ನಾಟಕ ಭಾಗದ ಶಿಕ್ಷಣ ಸಂಸ್ಥೆಗಳು ಹಾಗೂ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಆದ್ಯತೆ ನೀಡುತ್ತಿದೆ. ಈ ಭಾಗದಲ್ಲಿ ಖಾಲಿ ಇರುವ ಸುಮಾರು 7 ಸಾವಿರ ಶಿಕ್ಷಕರ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅಲ್ಲದೆ, ಸಂವಿಧಾನದ 371(ಜೆ) 2ನೇ ಪುಟಕ್ಕೆ

## ವಿವಿಧ ದೇವಾಲಯಗಳಿಗೆ ಶಾಸಕ ಡಾ. ಎಸ್. ಶಿವರಾಜ್ ಪಾಟೀಲ್ ಭೇಟಿ



ರಾಯಚೂರು: ನವರಾತ್ರಿ ಮಹೋತ್ಸವದ ಅಂಗವಾಗಿ ನಗರದ ವಿವಿಧ ದೇವಾಲಯಗಳಿಗೆ ಭೇಟಿ ನೀಡಿದ ರಾಯಚೂರು ನಗರ ಶಾಸಕ ಡಾ. ಎಸ್. ಶಿವರಾಜ್ ಪಾಟೀಲ್ ಅವರು ವಿಶೇಷ ಪೂಜಾ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ನಗರದ ಶ್ರೀ ಮಾತಾ ಜಮಲಮ್ಮ ದೇವಸ್ಥಾನದಲ್ಲಿ ನವರಾತ್ರಿ ಪ್ರಯುಕ್ತ ಆಯೋಜಿಸಿದ್ದ ಚಂಡಿ ಹೋಮದಲ್ಲಿ ಭಾಗವಹಿಸಿದ ಶಾಸಕರು, ಜಮಲಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿ ನಾಡಿನ ಜನತೆಯ ಸುಖ, ಶಾಂತಿ ಹಾಗೂ ಸಮೃದ್ಧಿಗಾಗಿ ಪ್ರಾರ್ಥಿಸಿದರು.

ಬಳಿಕ ನಗರದ 18ನೇ ವಾರ್ಡ್‌ನ ಶ್ರೀ ಬನ್ನಿ ಕಾಳಿಕಾ ಮಾತಾ ದೇವಸ್ಥಾನಕ್ಕೆ ತೆರಳಿ ದೇವಿಯ ದರ್ಶನ ಪಡೆದರು. ಅಲ್ಲಿಂದ 13ನೇ ವಾರ್ಡ್‌ನ ಶ್ರೀ ಮಾರಿಕಾಂಬ ದೇವಾಲಯಕ್ಕೆ ಭೇಟಿ ನೀಡಿ ಪೂಜೆ ಸಲ್ಲಿಸಿದರು. ನಂತರ 26ನೇ ವಾರ್ಡ್‌ನ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನಕ್ಕೆ ತೆರಳಿ ದೇವರ ದರ್ಶನ ಪಡೆದು ಆಶೀರ್ವಾದ ಪಡೆದರು.

ಇದೇ ಸಂದರ್ಭದಲ್ಲಿ ನಗರದ 5ನೇ ವಾರ್ಡ್‌ನ ನಿಜಲಿಂಗಪ್ಪ ಕಾಲೋನಿಯ ಶ್ರೀ ಬಲಮುರಿ ವಿನಾಯಕ ದೇವಸ್ಥಾನದಲ್ಲಿ ನವರಾತ್ರಿ ಉತ್ಸವದ ಪ್ರಯುಕ್ತ ಹಮ್ಮಿಕೊಂಡಿದ್ದ ಮುತ್ತೈದೆಯರಿಗೆ ಉಡಿ ತುಂಬುವ ಧಾರ್ಮಿಕ ಕಾರ್ಯಕ್ರಮದಲ್ಲಿ ಶಾಸಕ ಡಾ. ಎಸ್. ಶಿವರಾಜ್ ಪಾಟೀಲ್ ಪಾಲ್ಗೊಂಡರು.

ನವರಾತ್ರಿ ಹಬ್ಬದ ಹಿನ್ನೆಲೆಯಲ್ಲಿ ನಗರದ ವಿವಿಧ ದೇವಾಲಯಗಳಲ್ಲಿ ವಿಶೇಷ ಪೂಜೆ, ಹೋಮ ಹಾಗೂ ಸಾಂಪ್ರದಾಯಿಕ ಧಾರ್ಮಿಕ ಕಾರ್ಯಕ್ರಮಗಳು ನಡೆಯುತ್ತಿದ್ದು, ಭಕ್ತರು ಶ್ರದ್ಧಾಭಕ್ತಿಯಿಂದ ಪಾಲ್ಗೊಳ್ಳುತ್ತಿದ್ದಾರೆ. ಶಾಸಕ ಶಿವರಾಜ್ ಪಾಟೀಲ್ ಅವರ ದೇವಾಲಯಗಳ ಭೇಟಿಯು ನವರಾತ್ರಿ ಆಚರಣೆಯ ಭಾಗವಾಗಿತ್ತು.

## ಇಷ್ಟಲಿಂಗ ಪೂಜೆಯಲ್ಲಿ ಶಾಸಕ ಬಸನಗೌಡ ದದ್ದಲ್ ಭಾಗಿ: ಕಾಯಕ ಮತ್ತು ದಾಸೋಹದ ಮಹತ್ವ ಪ್ರತಿಪಾದನೆ



ರಾಯಚೂರು: ನವರಾತ್ರಿ ಮಹೋತ್ಸವದ ಅಂಗವಾಗಿ ರಾಯಚೂರು ಗ್ರಾಮೀಣ ವಿಧಾನಸಭಾ ಕ್ಷೇತ್ರದ ಸುಲ್ತಾನಪುರ, ಆಸ್ಕಿಹಾಳ ಹಾಗೂ ಮಾರೆಮ್ಮ ಕ್ಯಾಂಪ್‌ಗಳಿಗೆ ಭೇಟಿ ನೀಡಿದ ಶಾಸಕ ಬಸನಗೌಡ ದದ್ದಲ್ ಅವರು, ಜಗನ್ಮಾತೆ ಚಾಮುಂಡೇಶ್ವರಿಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಇದೇ ಸಂದರ್ಭದಲ್ಲಿ ವಿಜಯದಶಮಿ ಹಾಗೂ ಆಯುಧ ಪೂಜೆಯ ಶುಭಾಶಯಗಳನ್ನು ಕ್ಷೇತ್ರದ ಜನತೆಗೆ ತಿಳಿಸಿದರು.

ಸುಲ್ತಾನಪುರ ಮಠದಲ್ಲಿ ಶ್ರೀ ಪಂಚಾಕ್ಷರಿ ಶ್ರೀ ಶಂಭು ಸೋಮನಾಥೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳ ಸಾನ್ನಿಧ್ಯದಲ್ಲಿ ಆಯೋಜಿಸಿದ್ದ ಇಷ್ಟಲಿಂಗ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡ ಶಾಸಕರು, ಶ್ರೀಗಳ ಆಶೀರ್ವಾದ ಪಡೆದರು.

ಬಳಿಕ ಮಾತನಾಡಿದ ಶಾಸಕ ಬಸನಗೌಡ ದದ್ದಲ್, ಇಷ್ಟಲಿಂಗ ಪೂಜೆಯು ಭಕ್ತ ಮತ್ತು ಪರಮಾತ್ಮನ ನಡುವಿನ ನೇರ ಸಂಬಂಧವನ್ನು ಪ್ರತಿಬಿಂಬಿಸುವ ಆಧ್ಯಾತ್ಮಿಕ ಆಚರಣೆಯಾಗಿದೆ. ಪ್ರತಿಯೊಬ್ಬ ಮನುಷ್ಯನಲ್ಲಿಯೂ ದೈವತ್ವ ಅಡಗಿದ್ದು, ಅದನ್ನು ಅರಿತು ಸನ್ಮಾರ್ಗದಲ್ಲಿ ನಡೆಯುವಂತೆ ಇಷ್ಟಲಿಂಗ ಪೂಜೆ ಪ್ರೇರೇಪಿಸುತ್ತದೆ ಎಂದು ಹೇಳಿದರು.

ಮನುಷ್ಯನ ಬದುಕಿನಲ್ಲಿ ಸತ್ಯ, ಶುದ್ಧ ಮನಸ್ಸು, ದಯೆ, ಪ್ರಾಮಾಣಿಕತೆ, ಕಾಯಕ ಹಾಗೂ ದಾಸೋಹದಂತಹ ಮಾನವೀಯ ಮೌಲ್ಯಗಳಿಗೆ ವಿಶೇಷ ಸ್ಥಾನವಿದೆ. ಇಂತಹ ಆದರ್ಶಗಳನ್ನು ಕೇವಲ ಮಾತಿನಲ್ಲಿ ಹೇಳದೆ ನಿತ್ಯಜೀವನದಲ್ಲಿ ಅಳವಡಿಸಿಕೊಂಡಾಗ ಬದುಕು ಸಾರ್ಥಕವಾಗುತ್ತದೆ. ಧಾರ್ಮಿಕ ಆಚರಣೆಗಳು ಜನರಲ್ಲಿ ಸನ್ನಡತೆ, ಪರಸ್ಪರ ಪ್ರೀತಿ ಮತ್ತು ಸಾಮರಸ್ಯವನ್ನು ಬೆಳೆಸುವಂತಾಗಬೇಕು ಎಂದು ಅಭಿಪ್ರಾಯಪಟ್ಟರು.

ಬಸವಣ್ಣನವರು 2ನೇ ಪುಟಕ್ಕೆ

## ಪರಿಸರ ಕಾಳಜಿ ಬೆಳೆಸುವಲ್ಲಿ ಕವಿಗಳ ಪಾತ್ರ ಮಹತ್ವದ್ದು: ಜುಬೀನ್ ಮೊಹಾಪಾತ್ರ




ರಾಯಚೂರು: ಸಾಹಿತ್ಯವು ಸಮಾಜದ ಪರಿವರ್ತನೆಗೆ ಪ್ರಬಲ ಮಾಧ್ಯಮವಾಗಿದ್ದು, ಕವಿಗಳು ತಮ್ಮ ಕಾವ್ಯ ರಚನೆಗಳ ಮೂಲಕ ಜನರಲ್ಲಿ ಪ್ರಕೃತಿ ಪ್ರೇಮ, ಪರಿಸರ ಕಾಳಜಿ ಹಾಗೂ ಸಾಮಾಜಿಕ ಜವಾಬ್ದಾರಿಯ ಅರಿವು ಮೂಡಿಸಬೇಕು ಎಂದು ಮಹಾನಗರ ಪಾಲಿಕೆ ಆಯುಕ್ತ ಜುಬೀನ್ ಮೊಹಾಪಾತ್ರ ಅಭಿಪ್ರಾಯಪಟ್ಟರು.

ನಗರದ ಮಕ್ಕಾ ದರವಾಜಾ ಸಮೀಪ ರಾಯಚೂರು ಮಹಾನಗರ ಪಾಲಿಕೆ ವತಿಯಿಂದ ನಾಡಹಬ್ಬ ದಸರಾ-2026ರ ಪ್ರಯುಕ್ತ ಭಾನುವಾರ ಸಂಜೆ ಹಮ್ಮಿಕೊಂಡಿದ್ದ ಬಹುಭಾಷಾ ಕವಿಗೋಷ್ಠಿ ಹಾಗೂ ಸಾಂಸ್ಕೃತಿಕ ಸಮಾರಂಭದಲ್ಲಿ ಅವರು ಮಾತನಾಡಿದರು.

ರಾಯಚೂರು ಜಿಲ್ಲೆ ತನ್ನದೇ ಆದ ಐತಿಹಾಸಿಕ ಹಿರಿಮೆ, ವೈವಿಧ್ಯಮಯ ಸಂಸ್ಕೃತಿ ಹಾಗೂ ಶ್ರೀಮಂತ ಸಾಹಿತ್ಯ ಪರಂಪರೆಯನ್ನು ಹೊಂದಿದೆ. ಇಲ್ಲಿನ ಕವಿ, ಸಾಹಿತಿಗಳಲ್ಲಿ ಅಪಾರ ಪ್ರತಿಭೆಯಿದ್ದು, ಅವರ ಸೃಜನಶೀಲತೆಗೆ ಸೂಕ್ತ ವೇದಿಕೆ ಕಲ್ಪಿಸುವ ಅಗತ್ಯವಿದೆ. ಸಾಹಿತ್ಯ ಕೇವಲ ಮನರಂಜನೆಗೆ ಸೀಮಿತವಾಗದೆ ಸಮಾಜಕ್ಕೆ ಉತ್ತಮ ಸಂದೇಶ ನೀಡುವಂತಿರಬೇಕು. ವಿಶೇಷವಾಗಿ ನಾಡು, ನುಡಿ, ನೆಲ, ಜಲ, ಅರಣ್ಯ ಹಾಗೂ ನೈಸರ್ಗಿಕ ಸಂಪನ್ಮೂಲಗಳ ಮಹತ್ವವನ್ನು ಕವನಗಳ ಮೂಲಕ ಜನಮನಕ್ಕೆ ತಲುಪಿಸಬೇಕು ಎಂದು ಹೇಳಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಅಧ್ಯಕ್ಷ ವಿಜಯ್ ರಾಜೇಂದ್ರ ಮಾತನಾಡಿ, ಮಹಾನಗರ ಪಾಲಿಕೆ ಆಯೋಜಿಸುತ್ತಿರುವ ಬಹುಭಾಷಾ ಕವಿಗೋಷ್ಠಿಯ ವ್ಯಾಪ್ತಿಯನ್ನು ಮುಂದಿನ ವರ್ಷಗಳಲ್ಲಿ ಜಿಲ್ಲಾಮಟ್ಟಕ್ಕೆ ವಿಸ್ತರಿಸಬೇಕು. ಜಿಲ್ಲೆಯ ಎಲ್ಲ ತಾಲೂಕುಗಳ ಉದಯೋನ್ಮುಖ ಕವಿಗಳು, ಹಿರಿಯ ಸಾಹಿತಿಗಳು ಹಾಗೂ ಯುವ ಬರಹಗಾರರಿಗೆ ತಮ್ಮ ಪ್ರತಿಭೆ ಪ್ರದರ್ಶಿಸಲು ಅವಕಾಶ ಒದಗಿಸಬೇಕು ಎಂದು ಸಲಹೆ ನೀಡಿದರು.

ರಾಯಚೂರು ಜಿಲ್ಲೆಯಲ್ಲಿ ಕನ್ನಡದೊಂದಿಗೆ ತೆಲುಗು, ಉರ್ದು, ಹಿಂದಿ ಸೇರಿದಂತೆ ಹಲವು ಭಾಷೆಗಳು ಬಳಕೆಯಲ್ಲಿವೆ. ವಿವಿಧ ಭಾಷೆಗಳ ಕವಿಗಳನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಇಂತಹ 2ನೇ ಪುಟಕ್ಕೆ

# ಕವಿಗಳು ಸಮಾಜದ ವಾಸ್ತವ ಸಂಗತಿಗಳ ಮೇಲೆ ಬೆಳಕು ಚೆಲ್ಲಬೇಕು: ಶ್ರೀದೇವಿ ರಾಜಶೇಖರ ನಾಯಕ

ದೇವದುರ್ಗ: ಕವಿಗಳು ಸಮಾಜದಲ್ಲಿನ ವಾಸ್ತವ ಸಂಗತಿಗಳನ್ನು ಗುರುತಿಸಿ, ಅವುಗಳ ಮೇಲೆ ಬೆಳಕು ಚೆಲ್ಲುವ ಮೂಲಕ ಜನರಲ್ಲಿ ಜಾಗೃತಿ ಮೂಡಿಸಬೇಕು. ಸಾಹಿತ್ಯವು ಸಮಾಜದ ಅಂಕುಡೊಂಕುಗಳನ್ನು ತಿದ್ದುವ ಜೊತೆಗೆ ಜನರ ಬದುಕಿಗೆ ಮಾರ್ಗದರ್ಶನ ನೀಡುವಂತಿರಬೇಕು ಎಂದು ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಮಹಿಳಾ ಉಪಾಧ್ಯಕ್ಷೆ ಶ್ರೀದೇವಿ ರಾಜಶೇಖರ ನಾಯಕ ಹೇಳಿದರು.




ಪಟ್ಟಣದ ಸ್ನೇಹ ಮೆಲೋಡಿಸ್ ಸಿಂಗಿಂಗ್ ಕರೋಕೆ ಸ್ಟುಡಿಯೋದಲ್ಲಿ ಕರ್ನಾಟಕ ರಕ್ಷಣಾ ಸೇನೆ, ಮಕ್ಕಳ ಸಾಹಿತ್ಯ ಪರಿಷತ್ತು ಹಾಗೂ ಬೆಂಕು ಸಂಸ್ಥೆಯ ಸಹಯೋಗದಲ್ಲಿ ಭಾನುವಾರ ಆಯೋಜಿಸಿದ್ದ ದಸರಾ ಕವನಯಾನ ಕವಿಗೋಷ್ಠಿಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಮ್ಮ ತಾತ ಎ. ವೆಂಕಟೇಶ ನಾಯಕ ಅವರು ಕಲೆ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಚಟುವಟಿಕೆಗಳಿಗೆ ಸದಾ ಪ್ರೋತ್ಸಾಹ ನೀಡುತ್ತಿದ್ದರು. ಅವರ ಪ್ರಭಾವದಿಂದಲೇ ನನಗೂ ಸಾಹಿತ್ಯದ ಬಗ್ಗೆ ಆಸಕ್ತಿ ಬೆಳೆಯಿತು. ದೇವದುರ್ಗ ತಾಲೂಕಿನಲ್ಲಿ ಸಾಹಿತ್ಯ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಸುಸಜ್ಜಿತ ರಂಗಮಂದಿರ ನಿರ್ಮಾಣಕ್ಕೆ ಪ್ರಯತ್ನಿಸುವುದಾಗಿ ತಿಳಿಸಿದರು.

ತಾಲೂಕಿನಲ್ಲಿ ಸಾಕಷ್ಟು ಪ್ರತಿಭಾವಂತ ಕವಿಗಳಿದ್ದು, ಅವರಿಗೆ ಸೂಕ್ತ ವೇದಿಕೆ ಮತ್ತು ಪ್ರೋತ್ಸಾಹ ಒದಗಿಸುವ ಜವಾಬ್ದಾರಿ ಕನ್ನಡಪರ ಸಂಘಟನೆಗಳ ಮೇಲಿದೆ. ತಮಗೂ ಬಿಡುವಿನ ವೇಳೆಯಲ್ಲಿ ಬರವಣಿಗೆಯಲ್ಲಿ ತೊಡಗಿಸಿಕೊಳ್ಳುವ ಹವ್ಯಾಸವಿದೆ. ಪತಿ ರಾಜಶೇಖರ ನಾಯಕ ಅವರೊಂದಿಗೆ ಕೆಲವೊಮ್ಮೆ ಉಂಟಾಗುವ ಮುನಿಸಿಗೂ ಕವನದ ಮೂಲಕವೇ ಉತ್ತರಿಸುವ ಅಭ್ಯಾಸವಿದೆ ಎಂದು ಹೇಳುವ ಮೂಲಕ ಸಭಿಕರಲ್ಲಿ ನಗು ಮೂಡಿಸಿದರು.

ದೇವದುರ್ಗ ತಾಲೂಕಿಗೆ ಇದುವರೆಗೂ ಲಭಿಸದ ರಾಜ್ಯೋತ್ಸವ ಪ್ರಶಸ್ತಿ ದೊರೆಯುವಂತೆ ಪ್ರಯತ್ನಿಸುವುದಾಗಿ ಭರವಸೆ ನೀಡಿದ ಅವರು, ಸ್ಥಳೀಯ ಸಾಹಿತಿಗಳು ಮತ್ತು ಕಲಾವಿದರ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಕೆಲಸ ನಿರಂತರವಾಗಿ ನಡೆಯಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿಗಳಾದ ಮುನಿಯಪ್ಪ ನಾಗೋಲಿ, ಶಿವರಾಯ ಅಕ್ಕರಿಕಿ, ಚುಟುಕು ಸಾಹಿತ್ಯ ಪರಿಷತ್ತಿನ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಬ್ಯಾಗವಾಟ ಹಾಗೂ ನಿವೃತ್ತ ಶಿಕ್ಷಕ ಲಕ್ಷ್ಮಣ ನಾಯಕ ಮಾತನಾಡಿ, ಸಾಹಿತ್ಯದ ಬೆಳವಣಿಗೆಯಲ್ಲಿ ಕವಿಗೋಷ್ಠಿಗಳ ಪಾತ್ರ ಮತ್ತು ಯುವ ಬರಹಗಾರರಿಗೆ ಪ್ರೋತ್ಸಾಹ ನೀಡುವ ಅಗತ್ಯವನ್ನು ವಿವರಿಸಿದರು.

ಕವಿಗೋಷ್ಠಿಯ ಅಧ್ಯಕ್ಷತೆ ವಹಿಸಿದ್ದ ಗಜಲ್ ಕವಿ ಅಭಿಷೇಕ್ ಬಳೆ ಮಸರಕಲ್ ಮಾತನಾಡಿ, ಕಾವ್ಯ ರಚನೆ ಕೇವಲ ಪದಗಳ ಜೋಡಣೆಯಲ್ಲ. ಅದಕ್ಕೆ ಆಳವಾದ ಚಿಂತನೆ, ಅನುಭವ ಮತ್ತು ಸಾಮಾಜಿಕ ಕಾಳಜಿ ಅಗತ್ಯವಾಗಿದೆ. ಕವಿಗಳು ತಮ್ಮ ಸುತ್ತಮುತ್ತಲಿನ ಬದುಕನ್ನು ಸೂಕ್ಷ್ಮವಾಗಿ ಗಮನಿಸಿ, ಜನರ ನೋವು-ನಲಿವುಗಳಿಗೆ ಧ್ವನಿಯಾಗಬೇಕು ಎಂದು ಹೇಳಿದರು.

ಕವಿಗೋಷ್ಠಿಯಲ್ಲಿ ಭಾಗವಹಿಸಿದ್ದ 16 ಕವಿಗಳು ವಿಭಿನ್ನ ವಿಷಯಗಳ ಕುರಿತು ರಚಿಸಿದ ಕವನಗಳನ್ನು ವಾಚಿಸಿದರು. ಸಮಾಜದ ಅಂಕುಡೊಂಕುಗಳು, ನಾಡಿನ ಹೆಮ್ಮೆಯ ರಾಜಮನೆತನಗಳ ಪರಿಚಯ ಹಾಗೂ ಜನಜೀವನದ ವಾಸ್ತವ ಸಂಗತಿಗಳನ್ನು ಪ್ರತಿಬಿಂಬಿಸುವ ಕವನಗಳು ಗಮನ ಸೆಳೆದವು. ಕವಿಗಳು ತಮ್ಮ ರಚನೆಗಳ ಮೂಲಕ ಸಾಮಾಜಿಕ ಸಮಸ್ಯೆಗಳ ಜೊತೆಗೆ ಸಾಂಸ್ಕೃತಿಕ ಪರಂಪರೆಯ ಮಹತ್ವವನ್ನೂ ಅನಾವರಣಗೊಳಿಸಿದರು ಎಂದು ಅಭಿಷೇಕ್ ಮೆಚ್ಚುಗೆ ವ್ಯಕ್ತಪಡಿಸಿದರು.

ಉತ್ತರ ಕರ್ನಾಟಕ ಭಾಗದಲ್ಲಿ ಗಟ್ಟಿಯಾದ ಕಾವ್ಯ ಪರಂಪರೆಯಿದ್ದು, ಇಲ್ಲಿನ ಕವಿಗಳ ರಚನೆಗಳು ಜನಸಾಮಾನ್ಯರನ್ನು ತಲುಪಬೇಕು. ಕವಿತೆಗಳು ಕೇವಲ ವೇದಿಕೆಗಳಿಗೆ ಸೀಮಿತವಾಗದೆ ಓದುಗರ ಮನಸ್ಸನ್ನು ಮುಟ್ಟುವಂತಿರಬೇಕು. ಉತ್ತಮ ಕಾವ್ಯ ರಚನೆಗಾಗಿ ಕವಿಗಳು ತಪಸ್ಸು ಮತ್ತು ಧ್ಯಾನದಂತೆ ಸಮಯ ಮೀಸಲಿಟ್ಟು ಅಧ್ಯಯನ, ಚಿಂತನೆ ನಡೆಸಬೇಕು ಎಂದು ಸಲಹೆ ನೀಡಿದರು.

ಕವಿಗಳು ಅಹಂಕಾರ ಮತ್ತು ವೇದಿಕೆಯ ವ್ಯಾಮೋಹದಿಂದ ದೂರವಿರಬೇಕು. ಹಾರ, ತುರಾಯಿ ಹಾಗೂ ಸನ್ಮಾನಗಳಿಗಿಂತ ಸಾಹಿತ್ಯದ ಗುಣಮಟ್ಟಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಕಾರ್ಯಕ್ರಮಗಳಿಗೆ ಕಷ್ಟಪಟ್ಟು ಬರುವ ಮನೋಭಾವಕ್ಕಿಂತ ಸಾಹಿತ್ಯದ ಮೇಲಿನ ಪ್ರೀತಿಯಿಂದ ಭಾಗವಹಿಸುವ ಅಭ್ಯಾಸ ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಸ್ಥಳೀಯ ಪತ್ರಿಕೆಗಳು ಕವಿಗಳ ಕಥೆ, ಕವನ ಸ್ಪರ್ಧೆಗಳನ್ನು ಆಯೋಜಿಸುವ ಮೂಲಕ ಹೊಸ ಪ್ರತಿಭೆಗಳನ್ನು ಗುರುತಿಸಿ ಪ್ರೋತ್ಸಾಹಿಸಬೇಕು. ವಿಶೇಷವಾಗಿ ಗಜಲ್ ರಚನೆಯಲ್ಲಿ ಶಿಸ್ತು, ಲಯ ಹಾಗೂ ಭಾಷೆಯ ಬಳಕೆಗೆ ಹೆಚ್ಚಿನ ಗಮನ ನೀಡಬೇಕು. ಗಜಲ್‌ನ ಮೂಲ ಸ್ವರೂಪ ಮತ್ತು ಸಾಹಿತ್ಯಿಕ ನಿಯಮಗಳನ್ನು ಅರಿತು ಬರೆಯುವುದು ಅಗತ್ಯ ಎಂದು ತಿಳಿಸಿದರು.

ಕಾವ್ಯಕ್ಕೆ ತನ್ನದೇ ಆದ ಅರ್ಥ, ಭಾವ ಮತ್ತು ವ್ಯಾಖ್ಯಾನವಿರುತ್ತದೆ. ಪ್ರತಿಯೊಂದು ಕವಿತೆಯೂ ವಿಭಿನ್ನ ಸಾಹಿತ್ಯಿಕ ದೃಷ್ಟಿಕೋನವನ್ನು ಒಳಗೊಂಡಿರುತ್ತದೆ. ಕಾವ್ಯದಲ್ಲಿ ಅಂತರಂಗದ ಭಾವನೆ, ಕರುಣೆ ಹಾಗೂ ಮಾನವೀಯ ಸಂವೇದನೆಗಳು ವ್ಯಕ್ತವಾಗಬೇಕು. ಅಂತಹ ಸಾಹಿತ್ಯ ಮಾತ್ರ ಜನರ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆಯಲು ಸಾಧ್ಯ ಎಂದು ಅಭಿಷೇಕ್ ಬಳೆ ಮಸರಕಲ್ ಅಭಿಪ್ರಾಯಪಟ್ಟರು.

# ನಾರಾಯಣಪುರ ಬಲದಂಡೆ, ರಾಂಪುರ ಏತ ನೀರಾವರಿ ಕಾಲುವೆಗಳಿಗೆ ಜನವರಿ 15ರವರೆಗೆ ನೀರು ಹರಿಸಲು ರೈತರ ಆಗ್ರಹ



ಲಿಂಗಸುಗೂರು: ನಾರಾಯಣಪುರ ಬಲದಂಡೆ ಹಾಗೂ ರಾಂಪುರ ಏತ ನೀರಾವರಿ ಕಾಲುವೆಗಳ ಅಚ್ಚುಕಟ್ಟು ಪ್ರದೇಶದಲ್ಲಿ ಬೆಳೆದಿರುವ ಬೆಳೆಗಳನ್ನು ಉಳಿಸಲು ಜನವರಿ 15ರವರೆಗೆ ನಿರಂತರವಾಗಿ ನೀರು ಹರಿಸಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಾಲೂಕು ಅಧ್ಯಕ್ಷ ದುರ್ಗಾಪ್ರಸಾದ ರೆಡ್ಡಿ ನೇತೃತ್ವದಲ್ಲಿ ರೈತರು ನೀರಾವರಿ ಸಚಿವರಿಗೆ ಬರೆದ ಮನವಿಯನ್ನು ಸಹಾಯಕ ಆಯುಕ್ತ ನಾಗೇಂದ್ರ ಬಾಬು ಅವರಿಗೆ ಸಲ್ಲಿಸಿದರು.

ಅಚ್ಚುಕಟ್ಟು ಪ್ರದೇಶದಲ್ಲಿ ರೈತರು ಬೆಳೆದಿರುವ ಹತ್ತಿ, ಮೆಣಸಿನಕಾಯಿ ಸೇರಿದಂತೆ ವಿವಿಧ ಬೆಳೆಗಳು ಸಮರ್ಪಕವಾಗಿ ಕೈಗೆ ಬರಬೇಕಾದರೆ ಜನವರಿ 15ರವರೆಗೆ ನೀರಿನ ಅವಶ್ಯಕತೆಯಿದೆ. ಆದರೆ ಅಕ್ಟೋಬರ್ 15ರಂದು ನಡೆದ ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನವೆಂಬರ್ 12ರವರೆಗೆ ಮಾತ್ರ ಕಾಲುವೆಗಳಿಗೆ ನೀರು ಹರಿಸಲು ನಿರ್ಧರಿಸಿರುವುದು ರೈತರಲ್ಲಿ ಆತಂಕ ಮೂಡಿಸಿದೆ ಎಂದು ಮನವಿಯಲ್ಲಿ ತಿಳಿಸಿದ್ದಾರೆ.

ನವೆಂಬರ್ 12ಕ್ಕೆ ಕಾಲುವೆಗಳಿಗೆ ನೀರು ಸ್ಥಗಿತಗೊಳಿಸಿದರೆ ಈಗಾಗಲೇ ಬೆಳೆದಿರುವ ಬೆಳೆಗಳು ಕಾಳುಕಟ್ಟುವ ಹಾಗೂ ಫಸಲು ಬರುವ ಹಂತ ತಲುಪುವ ಮುನ್ನವೇ ಒಣಗಿಹೋಗುವ ಸಾಧ್ಯತೆಯಿದೆ. ಇದರಿಂದ ರೈತರು ನಿರೀಕ್ಷಿತ ಇಳುವರಿ ಪಡೆಯಲಾಗದೆ ಆರ್ಥಿಕ ಸಂಕಷ್ಟಕ್ಕೆ ಸಿಲುಕಲಿದ್ದಾರೆ. ಈಗಾಗಲೇ ಸಾಲ ಮಾಡಿ ಬಿತ್ತನೆ, ಗೊಬ್ಬರ, ಔಷಧ ಹಾಗೂ ಕೃಷಿ ಕೂಲಿ ವೆಚ್ಚ ಭರಿಸಿರುವ ರೈತರಿಗೆ ನೀರಿನ ಕೊರತೆ ಮತ್ತಷ್ಟು ಸಂಕಷ್ಟ ತಂದೊಡ್ಡಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಜಲಾಶಯದಲ್ಲಿನ ನೀರಿನ ಲಭ್ಯತೆಯನ್ನು ಪರಿಗಣಿಸಿ ಡಿಸೆಂಬರ್ 1ರವರೆಗೆ ವಾರಾಬಂದಿ ಪದ್ಧತಿಯಂತೆ ಕಾಲುವೆಗಳಿಗೆ ನೀರು ಹರಿಸಬೇಕು. ನಂತರ ಜನವರಿ 15ರವರೆಗೆ ನೀರಿನ ಹರಿವಿನ ಪ್ರಮಾಣವನ್ನು ಸೂಕ್ತವಾಗಿ ಪರಿವರ್ತಿಸಿ ಬೆಳೆಗಳಿಗೆ ಅಗತ್ಯವಿರುವ ನೀರು ಒದಗಿಸಬೇಕು. ಈ ಕ್ರಮದಿಂದ ಹತ್ತಿ, ಮೆಣಸಿನಕಾಯಿ ಸೇರಿದಂತೆ ವಿವಿಧ ಬೆಳೆಗಳನ್ನು ಉಳಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದು ರೈತರು ಮನವಿ ಮಾಡಿದರು.

ನೀರಾವರಿ ಪ್ರದೇಶದ ರೈತರು ತಮ್ಮ ಜೀವನೋಪಾಯಕ್ಕಾಗಿ ಸಂಪೂರ್ಣವಾಗಿ ಕೃಷಿಯನ್ನೇ ಅವಲಂಬಿಸಿದ್ದಾರೆ. ಬೆಳೆಗಳು ಕೈಗೆ ಬರುವ ಹಂತದಲ್ಲಿ ನೀರು ಸ್ಥಗಿತಗೊಂಡರೆ ತಿಂಗಳುಗಟ್ಟಲೆ ಪಟ್ಟ ಶ್ರಮ ವ್ಯರ್ಥವಾಗಲಿದೆ. ಬೆಳೆ ನಷ್ಟದಿಂದ ಸಾಲ ಮರುಪಾವತಿ ಮಾಡಲು ಸಾಧ್ಯವಾಗದೆ ರೈತ ಕುಟುಂಬಗಳು ತೀವ್ರ ಆರ್ಥಿಕ ಸಂಕಷ್ಟ ಎದುರಿಸಬೇಕಾಗುತ್ತದೆ. ಇಂತಹ ಪರಿಸ್ಥಿತಿ ನಿರ್ಮಾಣವಾದರೆ ಅದಕ್ಕೆ ರಾಜ್ಯ ಸರ್ಕಾರವೇ ಹೊಣೆಗಾರರಾಗಬೇಕಾಗುತ್ತದೆ ಎಂದು ರೈತ ಮುಖಂಡರು ಎಚ್ಚರಿಸಿದರು.

ರೈತರ ಹಿತದೃಷ್ಟಿಯಿಂದ ಸರ್ಕಾರ ನೀರಾವರಿ ಸಲಹಾ ಸಮಿತಿಯ ನಿರ್ಧಾರವನ್ನು ಮರುಪರಿಶೀಲಿಸಿ, ಬೆಳೆಗಳ ಸ್ಥಿತಿಗತಿ ಹಾಗೂ ನೀರಿನ ಲಭ್ಯತೆಯ ಆಧಾರದ ಮೇಲೆ ಕಾಲುವೆಗಳಿಗೆ ನೀರು ಹರಿಸುವ ಅವಧಿಯನ್ನು ವಿಸ್ತರಿಸಬೇಕು. ರೈತರ ಸಮಸ್ಯೆಗಳಿಗೆ ಸ್ಪಂದಿಸದೆ ನಿರ್ಲಕ್ಷ್ಯ ವಹಿಸಿದರೆ ಹೋರಾಟವನ್ನು ತೀವ್ರಗೊಳಿಸುವುದಾಗಿ ತಿಳಿಸಿದರು.

ನವೆಂಬರ್ 5ರೊಳಗೆ ಸರ್ಕಾರ ತನ್ನ ನಿರ್ಧಾರವನ್ನು ಬದಲಾಯಿಸದಿದ್ದರೆ ಗುರುಗುಂಟಾದಿಂದ ಲಿಂಗಸುಗೂರಿನ ಬಸವಸಾಗರ ಕ್ರಾಸ್‌ವರೆಗೆ ಪಾದಯಾತ್ರೆ ನಡೆಸಿ ಪ್ರತಿಭಟನೆ ಹಮ್ಮಿಕೊಳ್ಳುವುದಾಗಿ ರೈತ ಸಂಘದ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ರೈತರಾದ ಮಹ್ಮದ್ ಸಾಬ್, ಹನುಮಂತ ಹಳ್ಳಿ, ಹುಲಗಪ್ಪ ಡೊಳ್ಳ, ರಂಗಪ್ಪ, ಅಮರೇಶ ಭೂಪೂರ, ನಿತೀಶ್ ಕುಮಾರ್, ಶೀಲವಮತ, ವೆಂಕಟೇಶ, ಕನಕಪ್ಪ ಬಡಿಗೇರ, ಕರಿಯಪ್ಪ, ಹಿಮಾಮಸಾಬ್, ನಾಗರಾಜ ಸೇರಿದಂತೆ ಅನೇಕ ರೈತರು ಉಪಸ್ಥಿತರಿದ್ದರು.

# ಜಮಲಮ್ಮ ದೇವಿಯ ನೂತನ ರಥೋತ್ಸವಕ್ಕೆ ಶಾಸಕ ಡಾ. ಶಿವರಾಜ ಪಾಟೀಲ್ ಚಾಲನೆ

ರಾಯಚೂರು: ನಗರದ ಎನ್‌ಜಿಒ ಕಾಲೋನಿಯ ಶ್ರೀ ಜಮಲಮ್ಮ ದೇವಿ ದೇವಸ್ಥಾನದಲ್ಲಿ ಶರನ್ನವರಾತ್ರಿ ಮಹೋತ್ಸವದ ಅಂಗವಾಗಿ ದೇವಸ್ಥಾನದ ಸೇವಾ ಸಮಿತಿ ವತಿಯಿಂದ ಜಾತ್ರಾ ಮಹೋತ್ಸವ ಹಾಗೂ ನೂತನ ರಥೋತ್ಸವವನ್ನು ಭಕ್ತಿ, ಶ್ರದ್ಧೆಯಿಂದ ವಿಜೃಂಭಣೆಯಿಂದ ಆಚರಿಸಲಾಯಿತು.



ದೇವಸ್ಥಾನದಲ್ಲಿ ನೂತನವಾಗಿ ನಿರ್ಮಿಸಲಾದ ರಥೋತ್ಸವಕ್ಕೆ ರಾಯಚೂರು ನಗರ ಶಾಸಕ ಡಾ. ಎಸ್. ಶಿವರಾಜ ಪಾಟೀಲ್ ಅವರು ಕಾಯಿ, ಕರ್ಪೂರ ಸಮರ್ಪಿಸಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಜಮಲಮ್ಮ ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ರಥೋತ್ಸವದ ವಿಶೇಷ ಆಕರ್ಷಣೆಯಾಗಿ ನೂರಾರು ಮಹಿಳೆಯರು ಶ್ರದ್ಧಾಭಕ್ತಿಯಿಂದ ಜಮಲಮ್ಮ ದೇವಿಯ ರಥವನ್ನು ಎಳೆಯುವ ಮೂಲಕ ತಮ್ಮ ಭಕ್ತಿಸೇವೆ ಸಲ್ಲಿಸಿದರು. ದೇವಿಯ ಜಯಘೋಷಗಳ ನಡುವೆ ನಡೆದ ರಥೋತ್ಸವವು ಬಡಾವಣೆಯಲ್ಲಿ ಹಬ್ಬದ ವಾತಾವರಣ ನಿರ್ಮಿಸಿತು.

ಶರನ್ನವರಾತ್ರಿಯ ಅಂಗವಾಗಿ ಆಯೋಜಿಸಿದ್ದ ಜಾತ್ರಾ ಮಹೋತ್ಸವದಲ್ಲಿ ಬಡಾವಣೆಯ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ದೇವಿಗೆ ಪೂಜೆ ಸಲ್ಲಿಸಿದರು. ಮಹಿಳೆಯರು, ಮಕ್ಕಳು ಹಾಗೂ ಹಿರಿಯರು ಉತ್ಸಾಹದಿಂದ ಭಾಗವಹಿಸಿ ಧಾರ್ಮಿಕ ಕಾರ್ಯಕ್ರಮಕ್ಕೆ ಮೆರುಗು ನೀಡಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಹಾನಗರ ಪಾಲಿಕೆಯ ಮಾಜಿ ಸದಸ್ಯರಾದ ನಾಗರಾಜ, ಶಶಿರಾಜ, ಕಡಗೋಲ ಆಂಜನೇಯ್ಯ ಸೇರಿದಂತೆ ವಿವಿಧ ಜನಪ್ರತಿನಿಧಿಗಳು ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ದೇವಸ್ಥಾನದ ಅರ್ಚಕರು, ದೇವಸ್ಥಾನ ಸಮಿತಿಯ ಅಧ್ಯಕ್ಷರು, ಕಾರ್ಯದರ್ಶಿ, ಖಜಾಂಚಿ, ಸೇವಾ ಸಮಿತಿಯ ಪದಾಧಿಕಾರಿಗಳು ಹಾಗೂ ಬಡಾವಣೆಯ ನೂರಾರು ಭಕ್ತರು ಉಪಸ್ಥಿತರಿದ್ದರು.

## ಅಮೃತ ವಾಣಿ

ಜ್ಞಾನ ಮತ್ತು ಭಕ್ತಿಗಳಿಂದ ಮಾತ್ರ ಮನುಷ್ಯನು ಮಾಯೆಯ ಮುಷ್ಟಿಯಿಂದ ಪಾರಾಗಬಲ್ಲ.

## 1623 ನೆಯ ದಿನಕ್ಕೆ ಏಮ್ಸ್ ಹೋರಾಟ

अखिल भारतीय आयुर्विज्ञान संस्थान ALL INDIA INSTITUTE OF MEDICAL SCIENCES शरीरमाद्यं खलु धर्मसाधनम्

# ಪರಿಸರ ಕಾಳಜಿ ಬೆಳೆಸುವಲ್ಲಿ ಕವಿಗಳ ಪಾತ್ರ ಮಹತ್ವದ್ದು: ಜುಬೀನ್ ಮೊಹಾಪಾತ್ರ

ಕಾರ್ಯಕ್ರಮಗಳು ಭಾಷಾ ಸಾಮರಸ್ಯ ಮತ್ತು ಸಾಂಸ್ಕೃತಿಕ ಬಾಂಧವ್ಯವನ್ನು ಗಟ್ಟಿಗೊಳಿಸುತ್ತವೆ. ಕವಿಗೋಷ್ಠಿಯಲ್ಲಿ ವಾಚಿಸಲಾದ ಕವನಗಳನ್ನು ಸಂಕಲಿಸಿ ಸ್ಮರಣ ಸಂಚಿಕೆ ಹೊರತರಬೇಕು. ಭಾಗವಹಿಸುವ ಸಾಹಿತಿಗಳಿಗೆ ಸೂಕ್ತ ಗೌರವಧನ ನೀಡುವ ವ್ಯವಸ್ಥೆಯನ್ನೂ ಮಾಡಬೇಕು ಎಂದು ಒತ್ತಾಯಿಸಿದರು.

ಪತ್ರಕರ್ತ ಸಿದ್ದಯ್ಯಸ್ವಾಮಿ ಮಾತನಾಡಿ, ಕವಿಗಳ ಸಾಹಿತ್ಯವನ್ನು ಓದುಗರಿಗೆ ತಲುಪಿಸುವಲ್ಲಿ ಪತ್ರಿಕೆಗಳು ಹಾಗೂ ಇತರ ಮಾಧ್ಯಮಗಳು ಪ್ರಮುಖ ಪಾತ್ರ ವಹಿಸುತ್ತವೆ. ಕೋವಿಡ್ ನಂತರ ಪತ್ರಿಕೆಗಳಲ್ಲಿ ಸಾಹಿತ್ಯಕ್ಕೆ ಮೀಸಲಾದ ಪುರವಣಿಗಳ ಅವಕಾಶ ಕಡಿಮೆಯಾಗಿರುವ ಹಿನ್ನೆಲೆಯಲ್ಲಿ ಕವಿಗಳು ಆಧುನಿಕ ತಂತ್ರಜ್ಞಾನವನ್ನು ಸದುಪಯೋಗಪಡಿಸಿಕೊಳ್ಳಬೇಕು. ಸಾಮಾಜಿಕ ಜಾಲತಾಣಗಳ ಮೂಲಕ ತಮ್ಮ ಕವನ, ಲೇಖನ ಹಾಗೂ ಸಾಹಿತ್ಯ ಕೃತಿಗಳನ್ನು ಹೆಚ್ಚಿನ ಜನರಿಗೆ ತಲುಪಿಸಲು ಮುಂದಾಗಬೇಕು ಎಂದು ತಿಳಿಸಿದರು.

ಕವಿಗೋಷ್ಠಿಯಲ್ಲಿ ಭಾಗವಹಿಸಿದ್ದ ಕವಿಗಳು ಹಸಿರು ಪರಿಸರ, ಪ್ರಕೃತಿಯ ಸೊಬಗು, ನದಿ-ತೊರೆಗಳು, ಬೆಟ್ಟಗುಡ್ಡಗಳು, ಕೃಷಿ ಬದುಕು ಹಾಗೂ ಮಾನವ ಮತ್ತು ಪ್ರಕೃತಿಯ ನಡುವಿನ ಸಂಬಂಧವನ್ನು ಪ್ರತಿಬಿಂಬಿಸುವ ಕವನಗಳನ್ನು ವಾಚಿಸಿ ಸಾಹಿತ್ಯಾಸಕ್ತರ ಗಮನ ಸೆಳೆದರು. ವಿವಿಧ ಭಾಷೆಗಳ ಕಾವ್ಯ ವಾಚನ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

ಈ ಸಂದರ್ಭದಲ್ಲಿ ಅಂಜಿನಯ್ಯ ಜಾಲಿಬೆಂಚಿ, ವೆಂಕಟರಾವ್ ಕುಲಕರ್ಣಿ, ಸಿದ್ದಯ್ಯಸ್ವಾಮಿ, ರಘುನಾಥ ರೆಡ್ಡಿ ಮಂಚಾಲಪುರ, ಮುರಳೀಧರ ಕುಲಕರ್ಣಿ ಸೇರಿದಂತೆ ಹಲವು ಕವಿಗಳು, ಸಾಹಿತಿಗಳು ಹಾಗೂ ಸಾಹಿತ್ಯಾಭಿಮಾನಿಗಳು ಉಪಸ್ಥಿತರಿದ್ದರು.

## ಮೊದಲನೇ ಪುಟದಿಂದ

# ಮೋಹನ್ ಭಾಗವತ್ ವಿಜಯದಶಮಿ ಭಾಷಣಕ್ಕೆ ಪ್ರಧಾನಿ ಮೋದಿ ಮೆಚ್ಚುಗೆ: ರಾಷ್ಟ್ರ ನಿರ್ಮಾಣಕ್ಕೆ ಪಂಚ ಪರಿವರ್ತನೆಯ ಮಹತ್ವ

ಸಾಮಾಜಿಕ ಸಾಮರಸ್ಯ, ಕುಟುಂಬ ಪ್ರಬೋಧನ, ಪರಿಸರ ಸಂರಕ್ಷಣೆ, ಸ್ವದೇಶಿ ಜೀವನಶೈಲಿ ಹಾಗೂ ನಾಗರಿಕ ಕರ್ತವ್ಯ ಪಾಲನೆ ಎಂಬ ಐದು ಪ್ರಮುಖ ಅಂಶಗಳು ಈ ಪರಿಕಲ್ಪನೆಯ ಆಧಾರವಾಗಿವೆ ಎಂದು ತಿಳಿಸಿದರು.

ಸಮಾಜದಲ್ಲಿನ ಜಾತಿ, ವರ್ಗ ಮತ್ತು ಇತರ ಭೇದಭಾವಗಳನ್ನು ಮೀರಿ ಎಲ್ಲರೂ ಒಗ್ಗಟ್ಟಿನಿಂದ ಬದುಕುವುದು ಸಾಮಾಜಿಕ ಸಾಮರಸ್ಯದ ಉದ್ದೇಶವಾಗಿದೆ. ಕುಟುಂಬಗಳಲ್ಲಿ ಉತ್ತಮ ಸಂಸ್ಕಾರ, ನೈತಿಕ ಮೌಲ್ಯಗಳು ಹಾಗೂ ಪರಸ್ಪರ ಗೌರವವನ್ನು ಬೆಳೆಸುವುದು ಕುಟುಂಬ ಪ್ರಬೋಧನೆಯ ಆಶಯವಾಗಿದೆ. ಪರಿಸರ ಸಂರಕ್ಷಣೆಯ ಮೂಲಕ ಪ್ರಕೃತಿ ಸಂಪನ್ಮೂಲಗಳನ್ನು ಉಳಿಸುವುದು, ಸ್ವದೇಶಿ ಉತ್ಪನ್ನಗಳಿಗೆ ಆದ್ಯತೆ ನೀಡುವುದು ಹಾಗೂ ಸಾರ್ವಜನಿಕ ಜೀವನದಲ್ಲಿ ಶಿಸ್ತು ಮತ್ತು ಜವಾಬ್ದಾರಿಯನ್ನು ಪಾಲಿಸುವುದು ಉಳಿದ ಪ್ರಮುಖ ಅಂಶಗಳಾಗಿವೆ ಎಂದು ವಿವರಿಸಿದರು.

ವ್ಯಕ್ತಿಯ ನಡವಳಿಕೆಯಲ್ಲಿ ಉಂಟಾಗುವ ಸಕಾರಾತ್ಮಕ ಬದಲಾವಣೆ ಕುಟುಂಬ ಮತ್ತು ಸಮಾಜದ ಮೇಲೆ ಪರಿಣಾಮ ಬೀರುತ್ತದೆ. ಹೀಗಾಗಿ ರಾಷ್ಟ್ರ ನಿರ್ಮಾಣದ ಕಾರ್ಯವು ಪ್ರತಿಯೊಬ್ಬ ನಾಗರಿಕನ ವೈಯಕ್ತಿಕ ಜವಾಬ್ದಾರಿಯಿಂದಲೇ ಆರಂಭವಾಗಬೇಕು ಎಂಬುದನ್ನು ಭಾಗವತ್ ತಮ್ಮ ಭಾಷಣದಲ್ಲಿ ಒತ್ತಿಹೇಳಿದರು.

ಆರ್‌ಎಸ್‌ಎಸ್ ಶತಮಾನೋತ್ಸವದ ಹಿನ್ನೆಲೆಯಲ್ಲಿ ಸಂಘಟನೆಯು ವಿವಿಧ ಸಾಮಾಜಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ವಿಜಯದಶಮಿ ಆಚರಣೆಯು ಸಂಘಟನೆಯ ಇತಿಹಾಸ ಹಾಗೂ ಮುಂದಿನ ಕಾರ್ಯಯೋಜನೆಗಳ ಕುರಿತು ಚಿಂತನೆ ನಡೆಸುವ ಪ್ರಮುಖ ಸಂದರ್ಭವಾಗಿದೆ ಎಂದು ಭಾಗವತ್ ತಿಳಿಸಿದರು.

ಮೋಹನ್ ಭಾಗವತ್ ಅವರ ಭಾಷಣವನ್ನು ಪ್ರಧಾನಿ ಮೋದಿ ಶ್ಲಾಘಿಸಿರುವುದು ರಾಷ್ಟ್ರೀಯ ಏಕತೆ, ಸ್ವಾವಲಂಬನೆ, ಸಾಮಾಜಿಕ ಜವಾಬ್ದಾರಿ ಹಾಗೂ ಪಂಚ ಪರಿವರ್ತನೆಯಂತಹ ವಿಚಾರಗಳಿಗೆ ನೀಡಿರುವ ಮಹತ್ವವನ್ನು ಪ್ರತಿಬಿಂಬಿಸಿದೆ.

# ದುರ್ಗಾಷ್ಟಮಿ ಅಂಗವಾಗಿ ಶ್ರೀ ಮಂಚಾಲಮ್ಮ ದೇವಿಗೆ ವಿಶೇಷ ಸುಗಂಧ ದ್ರವ್ಯಾಭಿಷೇಕ

ಪರ್ವವಾಗಿದ್ದು, ದುರ್ಗಾಷ್ಟಮಿಯಂದು ದೇವಿಗೆ ವಿಶೇಷ ಪೂಜೆ ಸಲ್ಲಿಸುವುದು ಧಾರ್ಮಿಕ ಸಂಪ್ರದಾಯವಾಗಿದೆ. ಈ ಹಿನ್ನೆಲೆಯಲ್ಲಿ ಶ್ರೀಮಠದಲ್ಲಿ ಸಂಪ್ರದಾಯಬದ್ಧವಾಗಿ ಪೂಜಾ ಕೈಂಕರ್ಯಗಳನ್ನು ನೆರವೇರಿಸಲಾಯಿತು.

ಈ ವಿಶೇಷ ಧಾರ್ಮಿಕ ಕಾರ್ಯಕ್ರಮದಲ್ಲಿ ಶ್ರೀಮಠದ ಎಲ್ಲ ಆಡಳಿತ ಸಿಬ್ಬಂದಿ ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದು, ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಶ್ರೀ ಮಂಚಾಲಮ್ಮ ದೇವಿಯ ದರ್ಶನಾಶೀರ್ವಾದ ಪಡೆದರು.

ಶ್ರೀಮಠದ ಆಡಳಿತ ಮಂಡಳಿಯ ಸಿಬ್ಬಂದಿ, ಎಸ್‌ಜಿಎಸ್ ವಿದ್ಯಾಪೀಠದ ಪಂಡಿತರು ಹಾಗೂ ವಿದ್ಯಾರ್ಥಿಗಳ ಉಪಸ್ಥಿತಿಯಲ್ಲಿ ದುರ್ಗಾಷ್ಟಮಿ ವಿಶೇಷ ಪೂಜಾ ಕಾರ್ಯಕ್ರಮವು ಭಕ್ತಿಭಾವ ಮತ್ತು ಶ್ರದ್ಧೆಯಿಂದ ನೆರವೇರಿತು.

# ಧಾರ್ಮಿಕ ಕಾರ್ಯಕ್ರಮಗಳಿಂದ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ವೃದ್ಧಿ: ಎನ್.ಎಸ್. ಬೋಸರಾಜು

ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ, ಮುಖಂಡರಾದ ಚಂದ್ರಶೇಖರ್ ಮಿರ್ಜಾಪುರ, ರುದ್ರಪ್ಪ ಅಂಗಡಿ, ಜಯವಂತರಾವ್ ಪತಂಗೆ ಸೇರಿದಂತೆ ಅನೇಕ ಗಣ್ಯರು ಹಾಗೂ ಭಕ್ತರು ಉಪಸ್ಥಿತರಿದ್ದರು.

# ಆಯುಧ ಪೂಜೆ ಮೂಲಕ ಶ್ರಮದ ಮಹತ್ವ ಸಾರಿದ ಬೋವಿ ಸಮಾಜ: ಶಾಸಕ ಬಸನಗೌಡ ದದ್ದಲ್

ಸಮಾಜದ ಸಾಂಸ್ಕೃತಿಕ ಪರಂಪರೆಯನ್ನು ಮುಂದಿನ ಪೀಳಿಗೆಗೆ ಪರಿಚಯಿಸುತ್ತವೆ ಎಂದರು.

ದೇಶದ ವಿವಿಧ ಭಾಗಗಳಲ್ಲಿ ರೈತರು, ಕಾರ್ಮಿಕರು, ಕುಶಲಕರ್ಮಿಗಳು ಹಾಗೂ ವಾಹನ ಚಾಲಕರು ತಮ್ಮ ವೃತ್ತಿಗೆ ಸಂಬಂಧಿಸಿದ ಉಪಕರಣಗಳು ಮತ್ತು ವಾಹನಗಳಿಗೆ ಪೂಜೆ ಸಲ್ಲಿಸುವ ಪದ್ಧತಿ ರೂಢಿಯಲ್ಲಿದೆ. ಪ್ರತಿಯೊಂದು ವೃತ್ತಿಗೂ ತನ್ನದೇ ಆದ ಮಹತ್ವವಿದ್ದು, ಯಾವುದೇ ಕೆಲಸವನ್ನು ಕೀಳಾಗಿ ಕಾಣದೆ ದುಡಿಮೆಗೆ ಗೌರವ ನೀಡುವ ಮನೋಭಾವ ಪ್ರತಿಯೊಬ್ಬರಲ್ಲಿಯೂ ಬೆಳೆಯಬೇಕು ಎಂದು ಅಭಿಪ್ರಾಯಪಟ್ಟರು.

ಬೋವಿ ಸಮಾಜದ ಜನರು ಶಿಕ್ಷಣ, ಉದ್ಯೋಗ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ಹೆಚ್ಚಿನ ಪ್ರಗತಿ ಸಾಧಿಸಬೇಕು. ಸಮಾಜದ ಯುವಜನರು ಶೈಕ್ಷಣಿಕವಾಗಿ ಮುನ್ನಡೆಯುವ ಮೂಲಕ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು. ಶ್ರೀ ಸಿದ್ಧರಾಮೇಶ್ವರರ ಆಶೀರ್ವಾದದಿಂದ ಸಮಾಜದ ಪ್ರತಿಯೊಂದು ಕುಟುಂಬವೂ ಸುಖ, ಶಾಂತಿ ಮತ್ತು ಸಮೃದ್ಧಿಯಿಂದ ಜೀವನ ನಡೆಸುವಂತಾಗಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಚನ್ನಬಸವ, ಬಶೀರ್, ಕಡಗೋಲ್ ಆಂಜನೇಯ, ಶಶಿಕಲಾ ಭೀಮರಾಯ, ನಾರಾಯಣ ಸ್ವಾಮಿ ಸೇರಿದಂತೆ ಬೋವಿ ಸಮಾಜದ ಮುಖಂಡರು ಹಾಗೂ ಸಮಾಜದ ಅನೇಕರು ಉಪಸ್ಥಿತರಿದ್ದರು.

# ಔಷಧಿ ಅಂಗಡಿಗಳ ಸಹಕಾರದೊಂದಿಗೆ ನಕಲಿ ವೈದ್ಯರಿಂದ ಚಿಕಿತ್ಸೆ: ಡಾ. ನಂದಿತಾ ಎಂ.ಎನ್. ಆತಂಕ

ಅಭಿಪ್ರಾಯಪಟ್ಟಿದ್ದಾರೆ.

ಜಿಲ್ಲೆಯಲ್ಲಿ ನಕಲಿ ವೈದ್ಯರ ಹಾವಳಿಯನ್ನು ನಿಯಂತ್ರಿಸಲು ಆರೋಗ್ಯ ಇಲಾಖೆ ಕೈಗೊಂಡಿರುವ ಕಾರ್ಯಾಚರಣೆಯೊಂದಿಗೆ ಔಷಧ ನಿಯಂತ್ರಣ ಇಲಾಖೆಯೂ ಸಮನ್ವಯ ಸಾಧಿಸುವುದು ಅಗತ್ಯವಾಗಿದೆ. ಸಾರ್ವಜನಿಕರು ಸಹ ಚಿಕಿತ್ಸೆ ಪಡೆಯುವ ಮೊದಲು ವೈದ್ಯರ ಅಧಿಕೃತ ವಿದ್ಯಾರ್ಹತೆ ಹಾಗೂ ನೋಂದಣಿ ವಿವರಗಳನ್ನು ಪರಿಶೀಲಿಸಿಕೊಳ್ಳಬೇಕು ಎಂದು ಸಲಹೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಗಣೇಶ್ ಕೆ., ತಾಲೂಕು ಆರೋಗ್ಯಾಧಿಕಾರಿ ಡಾ. ಶರಣಬಸವರಾಜ್ ಸೇರಿದಂತೆ ಆರೋಗ್ಯ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಈಶಾನ್ಯ ಶಿಕ್ಷಕರ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಪರ ಎ. ವಸಂತಕುಮಾರ ಮತಯಾಚನೆ

ವಿಧಿಯಡಿ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಸುಮಾರು 32 ಸಾವಿರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ನಿರ್ಧರಿಸಿದೆ ಎಂದು ಅವರು ತಿಳಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗಾಗಿ 'ಅಕ್ಷರ ಆವಿಷ್ಕಾರ' ಯೋಜನೆಯಡಿ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ಈ ಭಾಗದ ಶೈಕ್ಷಣಿಕ ಪ್ರಗತಿಗೆ ಸರ್ಕಾರ ಅಗತ್ಯ ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕೆಪಿಸಿಸಿ ವಕ್ತಾರ ಡಾ. ರಝಾಕ್ ಉಸ್ತಾದ್, ಮಹಾನಗರ ಪಾಲಿಕೆ ಮಾಜಿ ಸದಸ್ಯ ಬಸವರಾಜ ದರೂರು, ರಾಮಕೃಷ್ಣ ನಾಯಕ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಕೆ. ಅಸ್ಲಂ ಪಾಶಾ, ಜೆ. ಸತ್ಯನಾಥ ಸೇರಿದಂತೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಇಷ್ಟಲಿಂಗ ಪೂಜೆಯಲ್ಲಿ ಶಾಸಕ ಬಸನಗೌಡ ದದ್ದಲ್ ಭಾಗಿ: ಕಾಯಕ ಮತ್ತು ದಾಸೋಹದ ಮಹತ್ವ ಪ್ರತಿಪಾದನೆ

ಪ್ರತಿಪಾದಿಸಿದ ಕಾಯಕವೇ ಕೈಲಾಸ ತತ್ವವು ಶ್ರಮದ ಮಹತ್ವವನ್ನು ಸಾರುತ್ತದೆ. ಯಾವುದೇ ವೃತ್ತಿಯನ್ನು ಕೀಳಾಗಿ ಕಾಣದೆ ಪ್ರಾಮಾಣಿಕತೆಯಿಂದ ದುಡಿಯುವುದು ಹಾಗೂ ದುಡಿಮೆಯ ಫಲದಲ್ಲಿ ಸಮಾಜದ ಒಳಿತಿಗೂ ಪಾಲು ನೀಡುವುದು ಶ್ರೇಷ್ಠ ಜೀವನ ಮೌಲ್ಯವಾಗಿದೆ. ಕಾಯಕ ಮತ್ತು ದಾಸೋಹದ ತತ್ವಗಳನ್ನು ಪ್ರತಿಯೊಬ್ಬರೂ ತಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ನವರಾತ್ರಿ ಹಾಗೂ ವಿಜಯದಶಮಿ ಹಬ್ಬಗಳು ದುಷ್ಟಶಕ್ತಿಗಳ ವಿರುದ್ಧ ಸತ್ಯ ಮತ್ತು ಧರ್ಮದ ವಿಜಯವನ್ನು ಸಾರುವ ಹಬ್ಬಗಳಾಗಿವೆ. ಈ ಹಬ್ಬಗಳು ಎಲ್ಲರ ಬದುಕಿನಲ್ಲಿ ಸುಖ, ಶಾಂತಿ, ಸಮೃದ್ಧಿ ತರಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಶಿವಪ್ಪ ನಾಯಕ, ಗ್ರಾಮದ ಹಿರಿಯರು, ಸುತ್ತಮುತ್ತಲಿನ ಗ್ರಾಮಗಳ ಮುಖಂಡರು, ಭಕ್ತಾದಿಗಳು ಹಾಗೂ ಸ್ಥಳೀಯ ಗ್ರಾಮಸ್ಥರು ಉಪಸ್ಥಿತರಿದ್ದರು.

# ನಶಾಮುಕ್ತ ಭಾರತ ಜಾಗೃತಿಗಾಗಿ 66 ದಿನಗಳಿಂದ ಸೈಕಲ್ ಯಾತ್ರೆ: ಡಾ. ಬಸವರಾಜ್ ಎಂ. ಪಾಟೀಲ್‌ಗೆ ಲಯನ್ಸ್ ಕ್ಲಬ್ ಸನ್ಮಾನ



ರಾಯಚೂರು: ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ, ನಶಾಮುಕ್ತ ಭಾರತ ನಿರ್ಮಾಣಕ್ಕೆ ಶ್ರಮಿಸುತ್ತಿರುವ ವೈದ್ಯ ಹಾಗೂ ಭಾರತೀಯ ವೈದ್ಯಕೀಯ ಸಂಘದ (ಐಎಂಎ) ರಾಯಚೂರು ಘಟಕದ ನೂತನ ಅಧ್ಯಕ್ಷ ಡಾ. ಬಸವರಾಜ್ ಎಂ. ಪಾಟೀಲ್ ಅವರ ಸಮಾಜಮುಖಿ ಸೇವೆಯನ್ನು ಗುರುತಿಸಿ ರಾಯಚೂರು ಲಯನ್ಸ್ ಕ್ಲಬ್ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು.

ಮಾದಕ ವಸ್ತುಗಳ ಸೇವನೆಯಿಂದ ವ್ಯಕ್ತಿಯ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಮೇಲೆ ಉಂಟಾಗುವ ದುಷ್ಪರಿಣಾಮಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಡಾ. ಬಸವರಾಜ್ ಎಂ. ಪಾಟೀಲ್ ಅವರು ಪ್ರತಿದಿನ ಬಸವ ಆಸ್ಪತ್ರೆಯಿಂದ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್) ಕಾಲೇಜಿನವರೆಗೆ ಸೈಕಲ್ ಸವಾರಿ ನಡೆಸುತ್ತಿದ್ದಾರೆ. ಸತತ 66 ದಿನಗಳಿಂದ ಈ ಜಾಗೃತಿ ಅಭಿಯಾನವನ್ನು ಮುಂದುವರಿಸಿರುವುದು ವಿಶೇಷವಾಗಿದೆ.

ವೈದ್ಯಕೀಯ ಸೇವೆಯ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತಿರುವ ಅವರು, ಯುವಜನತೆ ಮಾದಕ ವಸ್ತುಗಳ ವ್ಯಸನಕ್ಕೆ ಬಲಿಯಾಗದಂತೆ ಜಾಗೃತಿ ಮೂಡಿಸುವ ಕಾರ್ಯದಲ್ಲಿ ತೊಡಗಿಸಿಕೊಂಡಿದ್ದಾರೆ. ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಬೇಕೆಂಬ ಸಂದೇಶವನ್ನು ತಮ್ಮ ಸೈಕಲ್ ಅಭಿಯಾನದ ಮೂಲಕ ಸಾರುತ್ತಿದ್ದಾರೆ.

ಇತ್ತೀಚೆಗೆ ಭಾರತೀಯ ವೈದ್ಯಕೀಯ ಸಂಘದ ರಾಯಚೂರು ಘಟಕದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಿರುವ ಡಾ. ಬಸವರಾಜ್ ಎಂ. ಪಾಟೀಲ್ ಅವರು ವೈದ್ಯಕೀಯ ಕ್ಷೇತ್ರದ ಜವಾಬ್ದಾರಿಗಳೊಂದಿಗೆ ಸಮಾಜಮುಖಿ ಚಟುವಟಿಕೆಗಳಲ್ಲಿಯೂ ಸಕ್ರಿಯವಾಗಿ ತೊಡಗಿಸಿಕೊಂಡಿರುವುದು ಶ್ಲಾಘನೀಯ ಎಂದು ಲಯನ್ಸ್ ಕ್ಲಬ್ ಪದಾಧಿಕಾರಿಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಲಯನ್ಸ್ ಕ್ಲಬ್ ಸದಸ್ಯರು ಮಾತನಾಡಿ, ಮಾದಕ ವಸ್ತುಗಳ ಹಾವಳಿ ಸಮಾಜಕ್ಕೆ ದೊಡ್ಡ ಸವಾಲಾಗಿ ಪರಿಣಮಿಸುತ್ತಿರುವ ಇಂದಿನ ದಿನಗಳಲ್ಲಿ ವೈದ್ಯರೊಬ್ಬರು ನಿರಂತರವಾಗಿ ಸೈಕಲ್ ಸವಾರಿ ಮೂಲಕ ಜನಜಾಗೃತಿ ಮೂಡಿಸುತ್ತಿರುವುದು ಇತರರಿಗೆ ಮಾದರಿಯಾಗಿದೆ. ಇಂತಹ ಪ್ರಯತ್ನಗಳಿಗೆ ಸಮಾಜದ ಎಲ್ಲ ವರ್ಗಗಳಿಂದ ಪ್ರೋತ್ಸಾಹ ದೊರೆಯಬೇಕು ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಲಯನ್ಸ್ ಕ್ಲಬ್‌ನ ಯೆಮಣ್ಣ ಕೆ. ಉನ್ನಿ, ಗೋವಿಂದ ರಾಜು, ಸಿಎ ಪರಿತಾಲ ರವಿ, ಕೃಷ್ಣಮೂರ್ತಿ, ಜಂಬಣ್ಣ, ರಾಕೇಶ್ ರಾಜಲಬಂಡಿ ಸೇರಿದಂತೆ ಕ್ಲಬ್‌ನ ಪದಾಧಿಕಾರಿಗಳು ಹಾಗೂ ಸದಸ್ಯರು ಉಪಸ್ಥಿತರಿದ್ದು, ಡಾ. ಬಸವರಾಜ್ ಎಂ. ಪಾಟೀಲ್ ಅವರ ಸೇವೆಯನ್ನು ಶ್ಲಾಘಿಸಿ ಮುಂದಿನ ಜಾಗೃತಿ ಅಭಿಯಾನಕ್ಕೆ ಶುಭ ಹಾರೈಸಿದರು.

# ತುಂಗ ಬಿಂಬ ವರದಿ ಫಲಶ್ರುತಿ: ಅಬ್ದುಲ್ ಕಾಲೋನಿಯ ಚರಂಡಿ ಸಮಸ್ಯೆಗೆ ಸ್ಪಂದಿಸಿದ ಅಧಿಕಾರಿಗಳು

ಹಟ್ಟಿ ಚಿನ್ನದ ಗಣಿ: ಪಟ್ಟಣದ 12ನೇ ವಾರ್ಡ್‌ನ ಅಬ್ದುಲ್ ಕಾಲೋನಿಯಲ್ಲಿ ಅವೈಜ್ಞಾನಿಕವಾಗಿ ನಿರ್ಮಿಸಲಾದ ಚರಂಡಿಯಿಂದ ತ್ಯಾಜ್ಯ ನೀರು ಮನೆಗಳಿಗೆ ನುಗ್ಗಿ ನಿವಾಸಿಗಳು ಅನುಭವಿಸುತ್ತಿದ್ದ ಸಂಕಷ್ಟದ ಕುರಿತು ತುಂಗ ಬಿಂಬ ಪತ್ರಿಕೆ ಹಾಗೂ ವೆಬ್‌ಸೈಟ್‌ನಲ್ಲಿ ವರದಿ ಪ್ರಕಟವಾದ ಬೆನ್ನಲ್ಲೇ ಪಟ್ಟಣ ಪಂಚಾಯತ್ ಅಧಿಕಾರಿಗಳು ಎಚ್ಚೆತ್ತುಕೊಂಡು ಚರಂಡಿ ಸ್ವಚ್ಛತಾ ಕಾರ್ಯ ಕೈಗೊಂಡಿದ್ದಾರೆ.

ಅಬ್ದುಲ್ ಕಾಲೋನಿಯಲ್ಲಿ ಸಮರ್ಪಕವಾಗಿ ಚರಂಡಿ ನೀರು ಹರಿದುಹೋಗಲು ವ್ಯವಸ್ಥೆ ಇಲ್ಲದ ಕಾರಣ ತ್ಯಾಜ್ಯ ನೀರು ಮನೆಗಳೊಳಗೆ ನುಗ್ಗುತ್ತಿತ್ತು. ಕಳೆದ ಆರು ದಿನಗಳಿಂದ ನಿವಾಸಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದರು. ಚರಂಡಿ ನೀರಿನ ದುರ್ವಾಸನೆ, ಸೊಳ್ಳೆಗಳ ಕಾಟ ಹಾಗೂ ಅನೈರ್ಮಲ್ಯದಿಂದ ಸ್ಥಳೀಯರಲ್ಲಿ ಅನಾರೋಗ್ಯದ ಆತಂಕ ಉಂಟಾಗಿತ್ತು. ಸಮಸ್ಯೆಯ ಕುರಿತು



ಹಲವು ಬಾರಿ ಗಮನ ಸೆಳೆದರೂ ಪಟ್ಟಣ ಪಂಚಾಯತ್ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದರು.

ಈ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ತುಂಗ ಬಿಂಬ ಪತ್ರಿಕೆ



ತುಂಗ ಬಿಂಬ

Raichur Edition • 19-10-2026 • Page 3

ಅವೈಜ್ಞಾನಿಕ ಚರಂಡಿ ನಿರ್ಮಾಣದಿಂದ ಮನೆಗಳಿಗೆ ತ್ಯಾಜ್ಯ ನೀರು: ಅಬ್ದುಲ್ ಕಾಲೋನಿ ನಿವಾಸಿಗಳ ಆಕ್ರೋಶ

ಅಕ್ಟೋಬರ್ 17ರಂದು 'ಚರಂಡಿ ನಿರ್ಮಾಣದಿಂದ ತ್ಯಾಜ್ಯ ನೀರು ಮನೆ ಒಳಗೆ ನುಗ್ಗಿ ದುರ್ವಾಸನೆಗೆ ಸ್ಥಳೀಯ ನಿವಾಸಿಗಳ ಪರದಾಟ: ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಆಕ್ರೋಶ' ಎಂಬ ಶೀರ್ಷಿಕೆಯಡಿ ವರದಿ ಪ್ರಕಟಿಸಿ ನಿವಾಸಿಗಳ ಸಂಕಷ್ಟವನ್ನು ಅಧಿಕಾರಿಗಳ ಗಮನಕ್ಕೆ ತಂದಿತ್ತು.

ವರದಿ ಪ್ರಕಟವಾದ ನಂತರ ಎಚ್ಚೆತ್ತುಕೊಂಡ ಪಟ್ಟಣ ಪಂಚಾಯತ್ ಅಧಿಕಾರಿಗಳು ಹಾಗೂ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಯನ್ನು ಪರಿಶೀಲಿಸಿದರು. ಬಳಿಕ ಜೆಸಿಬಿ ಯಂತ್ರದ ಸಹಾಯದಿಂದ ಚರಂಡಿಯಲ್ಲಿ ಸಂಗ್ರಹವಾಗಿದ್ದ ತ್ಯಾಜ್ಯವನ್ನು ತೆರವುಗೊಳಿಸಿ, ಕೊಳಚೆ ನೀರು ಸರಾಗವಾಗಿ ಹರಿದುಹೋಗಲು ಅಗತ್ಯ ವ್ಯವಸ್ಥೆ ಮಾಡಿದರು ಎಂದು ಸ್ಥಳೀಯ ನಿವಾಸಿಗಳು ತಿಳಿಸಿದ್ದಾರೆ.

ಅಧಿಕಾರಿಗಳ ತ್ವರಿತ ಕ್ರಮದಿಂದ ತಾತ್ಕಾಲಿಕವಾಗಿ ಸಮಸ್ಯೆಗೆ ಪರಿಹಾರ ದೊರೆತಿದ್ದು, ನಿವಾಸಿಗಳು ನೆಮ್ಮದಿಯ ನಿಟ್ಟುಸಿರು ಬಿಟ್ಟಿದ್ದಾರೆ. ಆದರೆ ಮುಂದಿನ ದಿನಗಳಲ್ಲಿ ಇದೇ ಸಮಸ್ಯೆ ಮರುಕಳಿಸದಂತೆ ಚರಂಡಿ ವ್ಯವಸ್ಥೆಯನ್ನು ವೈಜ್ಞಾನಿಕವಾಗಿ ಸರಿಪಡಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕೆಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಜನಸಾಮಾನ್ಯರ ಸಮಸ್ಯೆಯನ್ನು ಬೆಳಕಿಗೆ ತಂದು ಅಧಿಕಾರಿಗಳು ಸ್ಪಂದಿಸುವಂತೆ ಮಾಡಿದ ತುಂಗ ಬಿಂಬ ಪತ್ರಿಕೆಯ ಸಂಪಾದಕರು ಹಾಗೂ ವರದಿಗಾರರಿಗೆ ಅಬ್ದುಲ್ ಕಾಲೋನಿಯ ನಿವಾಸಿಗಳು ಹೃತ್ಪೂರ್ವಕ ಅಭಿನಂದನೆ ಸಲ್ಲಿಸಿ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ.

# ಮನಸ್ಸಿನ ಒತ್ತಡ ನಿವಾರಿಸಿ ನೆಮ್ಮದಿ ನೀಡುವ ಶಕ್ತಿ ಸಂಗೀತಕ್ಕಿದೆ: ಸಾಹಿತಿ ತಾಯಪ್ಪ ಮರ್ಚಟಹಾಳ



ರಾಯಚೂರು: ಸಂಗೀತವು ಮನುಷ್ಯನ ಮನಸ್ಸಿಗೆ ಸಂತೋಷ ಮತ್ತು ನೆಮ್ಮದಿ ನೀಡುವುದರೊಂದಿಗೆ ದಿನನಿತ್ಯದ ಬದುಕಿನ ಒತ್ತಡಗಳನ್ನು ದೂರ ಮಾಡುವ ಅದ್ಭುತ ಶಕ್ತಿಯನ್ನು ಹೊಂದಿದೆ ಎಂದು ಸಾಹಿತಿ ತಾಯಪ್ಪ ಮರ್ಚಟಹಾಳ ಅಭಿಪ್ರಾಯಪಟ್ಟರು.

ನಗರದ ಅಂಬೇಡ್ಕರ್ ವೃತ್ತದ ಸಮೀಪವಿರುವ ಸರ್ಕಾರಿ ನೌಕರರ ಸಂಘದ ಸಭಾಂಗಣದಲ್ಲಿ ವಿ. ರಿಷಿತಾ ಅರ್ಪಣೆಯಲ್ಲಿ ಪ್ರಥಮ ಬಾರಿಗೆ ಆಯೋಜಿಸಿದ್ದ ಸರ್ಕಾರಿ ನೌಕರರ 'ಗಾನಲಹರಿ' ಕರೋಕೆ ಸಂಗೀತ ಸಂಜೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸರ್ಕಾರಿ ನೌಕರರು ತಮ್ಮ ವೃತ್ತಿಯ ಜವಾಬ್ದಾರಿ ಹಾಗೂ ಕೆಲಸದ ಒತ್ತಡದ ನಡುವೆಯೂ ತಮ್ಮಲ್ಲಿರುವ ಕಲಾಸಕ್ತಿಯನ್ನು ಜೀವಂತವಾಗಿಟ್ಟುಕೊಳ್ಳಬೇಕು. ಸಂಗೀತ, ಸಾಹಿತ್ಯ ಸೇರಿದಂತೆ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದರಿಂದ ಮಾನಸಿಕ ಉಲ್ಲಾಸ ದೊರೆಯುವುದರ ಜತೆಗೆ ವ್ಯಕ್ತಿತ್ವ ವಿಕಸನಕ್ಕೂ ಸಹಕಾರಿಯಾಗುತ್ತದೆ. ಇಂತಹ ಕಾರ್ಯಕ್ರಮಗಳು ನೌಕರರಲ್ಲಿರುವ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹಿಸಲು ಉತ್ತಮ ವೇದಿಕೆಯಾಗಿವೆ ಎಂದು ಹೇಳಿದರು.

ಮೊದಲ ಬಾರಿಗೆ ವೇದಿಕೆಯಲ್ಲಿ ಹಾಡಿದ ಗಾಯಕರಿಗೆ ಸಲಹೆ ನೀಡಿದ ಅವರು, ಸಂಗೀತ ಕಲಿಯುವವರು ಆತ್ಮವಿಶ್ವಾಸದಿಂದ ಹಾಡುವುದನ್ನು ರೂಢಿಸಿಕೊಳ್ಳಬೇಕು. ಆರಂಭದಲ್ಲಿ ಸಣ್ಣಪುಟ್ಟ ತಪ್ಪುಗಳಾದರೂ ನಿರಾಶರಾಗದೆ ನಿರಂತರ ಅಭ್ಯಾಸದಲ್ಲಿ ತೊಡಗಬೇಕು. ಹಾಡಿನ ಸಾಹಿತ್ಯ, ಅದರ ಅರ್ಥ, ಭಾವನೆ ಹಾಗೂ ರಾಗದ ಲಯವನ್ನು ಅರ್ಥೈಸಿಕೊಂಡು ಹಾಡಿದಾಗ ಗಾಯನ ಹೆಚ್ಚು ಪರಿಣಾಮಕಾರಿಯಾಗುತ್ತದೆ. ಇತರ ಕಲಾವಿದರ ಗಾಯನವನ್ನು ಆಲಿಸುವುದರೊಂದಿಗೆ ತಮ್ಮದೇ ಆದ ವಿಶಿಷ್ಟ ಶೈಲಿಯನ್ನು ಬೆಳೆಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಪ್ರಶಂಸೆ ದೊರೆತಾಗ ಅತಿಯಾದ ಹೆಮ್ಮೆ ಪಡದೆ, ಟೀಕೆಗಳು ಎದುರಾದಾಗ ಧೃತಿಗೆಡದೆ ಕಲೆಯ ಮೇಲಿನ ಆಸಕ್ತಿಯನ್ನು ಮುಂದುವರಿಸಬೇಕು. ಸಂಗೀತವನ್ನು ಕೇವಲ ಮನರಂಜನೆಯ ಸಾಧನವಾಗಿ ಪರಿಗಣಿಸದೆ ಜೀವನದ ಅವಿಭಾಜ್ಯ ಅಂಗವಾಗಿ ಸ್ವೀಕರಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ರೂವಾರಿ ಯಂಕಪ್ಪ ಪಿರಂಗಿ ಮಾತನಾಡಿ, ಸರ್ಕಾರಿ ನೌಕರರಲ್ಲಿ ಅಡಗಿರುವ ಕಲಾಪ್ರತಿಭೆಯನ್ನು ಹೊರತರುವ ಉದ್ದೇಶದಿಂದ ಈ ಸಂಗೀತ ಸಂಜೆಯನ್ನು ಆಯೋಜಿಸಲಾಗಿದೆ. ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ನೌಕರರ ನಡುವೆ ಸ್ನೇಹ, ಪರಸ್ಪರ ವಿಶ್ವಾಸ ಹಾಗೂ ಸೌಹಾರ್ದ ಸಂಬಂಧಗಳನ್ನು ಬೆಳೆಸುತ್ತವೆ. ಮುಂದಿನ ದಿನಗಳಲ್ಲಿಯೂ ಸಂಗೀತ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಮತ್ತೋರ್ವ ಅತಿಥಿ ನಂದೀಶ ಮಾತನಾಡಿ, ಪ್ರತಿಯೊಬ್ಬ ವ್ಯಕ್ತಿಯಲ್ಲಿಯೂ ಒಂದಲ್ಲ ಒಂದು ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಬೆಳಕಿಗೆ ತರಲು ಸೂಕ್ತ ಅವಕಾಶ ಮತ್ತು ಪ್ರೋತ್ಸಾಹ ಅಗತ್ಯವಾಗಿದೆ. ಸರ್ಕಾರಿ ನೌಕರರ ಬಿಡುವಿಲ್ಲದ ಕೆಲಸದ ನಡುವೆ ಆಯೋಜಿಸಿರುವ 'ಒಲಿದಂತೆ ಹಾಡುವೆ' ಸಂಗೀತ ಕಾರ್ಯಕ್ರಮವು ಅವರಲ್ಲಿನ ಗಾಯನಾಸಕ್ತಿಗೆ ವೇದಿಕೆ ಕಲ್ಪಿಸಿದೆ. ಇಂತಹ ಪ್ರಯತ್ನಗಳು ಇನ್ನಷ್ಟು ವಿಸ್ತಾರಗೊಳ್ಳಬೇಕು ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಸರ್ಕಾರಿ ನೌಕರರು ಕರೋಕೆ ಸಂಗೀತದೊಂದಿಗೆ ವಿವಿಧ ಗೀತೆಗಳನ್ನು ಹಾಡುವ ಮೂಲಕ ತಮ್ಮ ಗಾಯನ ಪ್ರತಿಭೆಯನ್ನು ಪ್ರದರ್ಶಿಸಿದರು. ಸಂಗೀತ ಸಂಜೆ ನೌಕರರ ಸಾಂಸ್ಕೃತಿಕ ಆಸಕ್ತಿ ಹಾಗೂ ಕಲಾಪ್ರೇಮಕ್ಕೆ ಸಾಕ್ಷಿಯಾಯಿತು.

ಈ ಸಂದರ್ಭದಲ್ಲಿ ಗೂಳಪ್ಪ, ಕೃಷ್ಣಪ್ಪ, ರಂಗನಾಥ, ಯಂಕಪ್ಪ ಪಿರಂಗಿ, ಜಿಂದಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಶಿಕ್ಷಕ ಶಿವರಾಜ್ ಸ್ವಾಗತಿಸಿದರು. ರಾಜಶೇಖರ ಬಿ.ಎಲ್. ಕಾರ್ಯಕ್ರಮ ನಿರೂಪಿಸಿ, ಕೊನೆಯಲ್ಲಿ ವಂದಿಸಿದರು.

# ರಾಷ್ಟ್ರಮಟ್ಟದ ಕಬಡ್ಡಿ ಪಂದ್ಯಾವಳಿಗೆ ಶಾಸಕ ಡಾ. ಶಿವರಾಜ್ ಪಾಟೀಲ್ ಚಾಲನೆ



ರಾಯಚೂರು: ನಾಡಹಬ್ಬ ದಸರಾ ಮಹೋತ್ಸವದ ಅಂಗವಾಗಿ ರಾಯಚೂರು ನಗರ ವಿಧಾನಸಭಾ ಕ್ಷೇತ್ರದ ಸಿದ್ರಾಂಪುರ ಗ್ರಾಮದಲ್ಲಿ ಸನ್ನಿ ಮಹಾರಾಜ್ ಯೂತ್ ಫೋರ್ಸ್ ವತಿಯಿಂದ ಆಯೋಜಿಸಿದ್ದ ಮೂರನೇ ವರ್ಷದ ರಾಷ್ಟ್ರಮಟ್ಟದ ಕಬಡ್ಡಿ ಪಂದ್ಯಾವಳಿಗೆ ನಗರ ಶಾಸಕ ಡಾ. ಎಸ್. ಶಿವರಾಜ್ ಪಾಟೀಲ್ ಅವರು ಅದ್ದೂರಿಯಾಗಿ ಚಾಲನೆ ನೀಡಿದರು.

ಗ್ರಾಮದಲ್ಲಿ ಹಬ್ಬದ ಸಂಭ್ರಮದೊಂದಿಗೆ ಆಯೋಜಿಸಲಾಗಿದ್ದ ಕಬಡ್ಡಿ ಪಂದ್ಯಾವಳಿಯಲ್ಲಿ ದೇಶದ ವಿವಿಧ ಭಾಗಗಳಿಂದ ಆಗಮಿಸಿದ ಕ್ರೀಡಾಪಟುಗಳು ಉತ್ಸಾಹದಿಂದ ಪಾಲ್ಗೊಂಡರು. ಕಬಡ್ಡಿ ಅಂಕಣದಲ್ಲಿ ಆಟಗಾರರ ಚುರುಕಿನ ಚಲನೆ, ಎದುರಾಳಿ ತಂಡಗಳ ನಡುವಿನ ಪೈಪೋಟಿ ಹಾಗೂ ರೋಚಕ ಪಂದ್ಯಗಳು ನೆರೆದಿದ್ದ ಕ್ರೀಡಾಭಿಮಾನಿಗಳ ಗಮನ ಸೆಳೆದವು.

ಪಂದ್ಯಾವಳಿಯನ್ನು ಉದ್ಘಾಟಿಸಿದ ಶಾಸಕ ಡಾ. ಶಿವರಾಜ್ ಪಾಟೀಲ್ ಅವರು ಕ್ರೀಡಾಪಟುಗಳಿಗೆ ಶುಭ ಹಾರೈಸಿದರು. ಗ್ರಾಮೀಣ ಪ್ರದೇಶದಲ್ಲಿ ರಾಷ್ಟ್ರಮಟ್ಟದ ಕ್ರೀಡಾಕೂಟ ಆಯೋಜಿಸಿರುವ ಸನ್ನಿ ಮಹಾರಾಜ್ ಯೂತ್ ಫೋರ್ಸ್ ಸಂಘಟಕರ ಪ್ರಯತ್ನಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕಬಡ್ಡಿ ನಮ್ಮ ದೇಶದ ಸಾಂಪ್ರದಾಯಿಕ ಕ್ರೀಡೆಗಳಲ್ಲಿ ಒಂದಾಗಿದ್ದು, ಗ್ರಾಮೀಣ ಭಾಗದ ಯುವಜನರಲ್ಲಿ ವಿಶೇಷ ಜನಪ್ರಿಯತೆ ಹೊಂದಿದೆ. ದೈಹಿಕ ಸಾಮರ್ಥ್ಯ, ಚುರುಕುತನ, ಶಿಸ್ತು, ಧೈರ್ಯ ಹಾಗೂ ತಂಡದ ಒಗ್ಗಟ್ಟನ್ನು ಬೆಳೆಸುವಲ್ಲಿ ಈ ಕ್ರೀಡೆ ಮಹತ್ವದ ಪಾತ್ರ ವಹಿಸುತ್ತದೆ. ಇಂತಹ ಪಂದ್ಯಾವಳಿಗಳು ಗ್ರಾಮೀಣ ಪ್ರತಿಭೆಗಳಿಗೆ ತಮ್ಮ ಕ್ರೀಡಾ ಕೌಶಲ್ಯ ಪ್ರದರ್ಶಿಸಲು ಉತ್ತಮ ವೇದಿಕೆಯಾಗಿವೆ.

ದಸರಾಹಬ್ಬದಸಂಭ್ರಮದನಡುವೆನಡೆದಕಬಡ್ಡಿಪಂದ್ಯಾವಳಿಯು ಸಿದ್ರಾಂಪುರ ಗ್ರಾಮದಲ್ಲಿ ಕ್ರೀಡೋತ್ಸವದ ವಾತಾವರಣ ನಿರ್ಮಿಸಿತು. ವಿವಿಧ ಪ್ರದೇಶಗಳಿಂದ ಆಗಮಿಸಿದ್ದ ತಂಡಗಳ ಆಟವನ್ನು ವೀಕ್ಷಿಸಲು ಗ್ರಾಮಸ್ಥರು ಹಾಗೂ ಕ್ರೀಡಾಭಿಮಾನಿಗಳು ಆಸಕ್ತಿಯಿಂದ ಸೇರಿದ್ದರು. ಆಟಗಾರರ ಪ್ರತಿ ಚುರುಕಿನ ದಾಳಿ ಮತ್ತು ಹಿಡಿತಕ್ಕೆ ಪ್ರೇಕ್ಷಕರು ಚಪ್ಪಾಳೆ ತಟ್ಟಿ ಹುರಿದುಂಬಿಸಿದರು.

ಸತತ ಮೂರನೇ ವರ್ಷ ರಾಷ್ಟ್ರಮಟ್ಟದ ಕಬಡ್ಡಿ ಪಂದ್ಯಾವಳಿಯನ್ನು ಆಯೋಜಿಸುವ ಮೂಲಕ ಸನ್ನಿ ಮಹಾರಾಜ್ ಯೂತ್ ಫೋರ್ಸ್ ಗ್ರಾಮೀಣ ಕ್ರೀಡಾ ಚಟುವಟಿಕೆಗಳಿಗೆ ಉತ್ತೇಜನ ನೀಡುತ್ತಿದೆ. ಯುವಜನರನ್ನು ಕ್ರೀಡೆಯತ್ತ ಆಕರ್ಷಿಸುವುದರ ಜೊತೆಗೆ ವಿವಿಧ ಪ್ರದೇಶಗಳ ಕ್ರೀಡಾಪಟುಗಳ ನಡುವೆ ಸ್ನೇಹ, ಸಹಕಾರ ಮತ್ತು ಕ್ರೀಡಾಸ್ಫೂರ್ತಿ ಬೆಳೆಸಲು ಈ ಪಂದ್ಯಾವಳಿ ಸಹಕಾರಿಯಾಗಿದೆ.

ಈ ಸಂದರ್ಭದಲ್ಲಿ ರಾಯಚೂರಿನ ಹಿರಿಯ ಮುಖಂಡರು, ಸಿದ್ರಾಂಪುರ ಗ್ರಾಮದ ಪ್ರಮುಖರು, ಯುವಕರು, ಕ್ರೀಡಾಪಟುಗಳು ಹಾಗೂ ಅಪಾರ ಸಂಖ್ಯೆಯ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದು, ಪಂದ್ಯಾವಳಿಯಲ್ಲಿ ಭಾಗವಹಿಸಿದ ತಂಡಗಳಿಗೆ ಶುಭ ಹಾರೈಸಿದರು.

# ಅಂಬೇಡ್ಕರ್ ಅವರ ಸಮಾನತೆಯ ಸಂದೇಶ ಸಾರಲು ದೀಕ್ಷಾಭೂಮಿ ಯಾತ್ರೆ: ಸಾಹಿರಬಾನು ನದಾಫ್



ಮಾನ್ವಿ: ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಬೌದ್ಧ ಧರ್ಮ ಸ್ವೀಕರಿಸಿದ ಐತಿಹಾಸಿಕ ದೀಕ್ಷಾಭೂಮಿಯ ಮಹತ್ವವನ್ನು ಜನಸಾಮಾನ್ಯರಿಗೆ ಪರಿಚಯಿಸುವುದರ ಜೊತೆಗೆ ಅವರ ಸಮಾನತೆ, ಸ್ವಾತಂತ್ರ್ಯ, ಸಹೋದರತೆ ಹಾಗೂ ಸಾಮಾಜಿಕ ನ್ಯಾಯದ ಆಶಯಗಳನ್ನು ಸಮಾಜದ ಪ್ರತಿಯೊಬ್ಬರಿಗೂ ತಲುಪಿಸುವ ಉದ್ದೇಶದಿಂದ ದೀಕ್ಷಾಭೂಮಿ ಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ತಾಲೂಕು ಸಹಾಯಕ ನಿರ್ದೇಶಕಿ ಸಾಹಿರಬಾನು ನದಾಫ್ ತಿಳಿಸಿದರು.

ಪಟ್ಟಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ ದೀಕ್ಷಾಭೂಮಿ ಯಾತ್ರೆಯ ಬಸ್‌ಗೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಭಾರತ ರತ್ನ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಮಾಜದಲ್ಲಿನ ಅಸಮಾನತೆ, ಅಸ್ಪೃಶ್ಯತೆ ಹಾಗೂ ಜಾತಿ ತಾರತಮ್ಯದ ವಿರುದ್ಧ ಜೀವನಪೂರ್ತಿ ಹೋರಾಟ ನಡೆಸಿದರು. ಪ್ರತಿಯೊಬ್ಬ ವ್ಯಕ್ತಿಗೂ ಸಮಾನ ಹಕ್ಕು ಮತ್ತು ಗೌರವಯುತ ಬದುಕು ದೊರೆಯಬೇಕೆಂಬುದು ಅವರ ಆಶಯವಾಗಿತ್ತು. ಅವರ ಜೀವನ, ಹೋರಾಟ ಮತ್ತು ಸಾಮಾಜಿಕ ಪರಿವರ್ತನೆಯ ಸಂದೇಶವನ್ನು ಜನರಿಗೆ ತಲುಪಿಸುವಲ್ಲಿ ಇಂತಹ ಯಾತ್ರೆಗಳು ಮಹತ್ವದ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಪ್ರಗತಿಪರ ಸಂಘಟನೆಯ ಮುಖಂಡ ಕಾಶಿನಾಥ ಕುರ್ಡಿ ಮಾತನಾಡಿ, ಅಂಬೇಡ್ಕರ್ ಅವರ ವಿಚಾರಧಾರೆಗಳು ಹಾಗೂ ಸಂವಿಧಾನದ ಆಶಯಗಳ ಕುರಿತು ಜನರಲ್ಲಿ ಅರಿವು ಮೂಡಿಸುವ ಅಗತ್ಯವಿದೆ. ದೀಕ್ಷಾಭೂಮಿ ಕೇವಲ ಐತಿಹಾಸಿಕ ಸ್ಥಳವಲ್ಲ, ಸಾಮಾಜಿಕ ಸಮಾನತೆ ಮತ್ತು ಮಾನವೀಯ ಮೌಲ್ಯಗಳ ಸಂಕೇತವಾಗಿದೆ. ಅಂಬೇಡ್ಕರ್ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಜಾತಿ, ಧರ್ಮ ಹಾಗೂ ವರ್ಗಭೇದವಿಲ್ಲದ ಸಮಾನತೆಯ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ರಾಮಲಿಂಗಪ್ಪ, ತಾಲೂಕಿನ ವಿವಿಧ ಸಂಘಟನೆಗಳ ಪದಾಧಿಕಾರಿಗಳಾದ ಅಂಬರೀಶ್ ನಂದಿಹಾಳ, ತಾಯಣ್ಣ ಕಪಗಲ್, ನರಸಿಂಲು ಸೀಕಲ್, ಹುಸೇನಪ್ಪ ನಂದಿಹಾಳ, ಬಸವರಾಜ್ ಬಾಗಲವಾಡ, ಲಿಂಗರಾಜ್ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ತಾಲೂಕು ಮೋಚಿಗಾರ ಸಮಾಜದ ಅಧ್ಯಕ್ಷರಾಗಿ ಮನು ಅಲಬನೂರು, ಉಪಾಧ್ಯಕ್ಷರಾಗಿ ಶೈಲೇಂದ್ರ ಗುಡುಗುಂಟಿ ಆಯ್ಕೆ



ರಾಯಚೂರು: ದೇವದುರ್ಗ ತಾಲೂಕು ಮೋಚಿಗಾರ ಸಮಾಜದ ನೂತನ ಅಧ್ಯಕ್ಷರಾಗಿ ಮನು ಅಲಬನೂರು ಹಾಗೂ ಉಪಾಧ್ಯಕ್ಷರಾಗಿ ಶೈಲೇಂದ್ರ ಗುಡುಗುಂಟಿ ಅವರನ್ನು ಆಯ್ಕೆ ಮಾಡಲಾಗಿದೆ.

ನಗರದ ಶ್ರೀ ಶಂಕರಲಿಂಗೇಶ್ವರ ದೇವಸ್ಥಾನದಲ್ಲಿ ಅಕ್ಟೋಬರ್ 18ರಂದು ರಾಯಚೂರು ಜಿಲ್ಲಾ ಮೋಚಿಗಾರ ಸಮಾಜದ ಅಧ್ಯಕ್ಷ ಡಿ. ಭೀಮರಾಜ್ ಅವರ ನೇತೃತ್ವದಲ್ಲಿ ನಡೆದ ಪದಾಧಿಕಾರಿಗಳ ಸಭೆಯಲ್ಲಿ ನೂತನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಯ್ಕೆ ಪ್ರಕ್ರಿಯೆ ನಡೆಯಿತು.

ಜಿಲ್ಲಾ ಮೋಚಿಗಾರ ಸಮಾಜದ ಹಿರಿಯರು, ಯುವಕರು ಹಾಗೂ ಪದಾಧಿಕಾರಿಗಳ ಸಮ್ಮುಖದಲ್ಲಿ ದೇವದುರ್ಗ ತಾಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಸಮಾಜದ ಸಂಘಟನೆ, ಒಗ್ಗಟ್ಟು ಹಾಗೂ ಅಭಿವೃದ್ಧಿ ಚಟುವಟಿಕೆಗಳಿಗೆ ಹೆಚ್ಚಿನ ಆದ್ಯತೆ ನೀಡುವ ಉದ್ದೇಶದಿಂದ ತಾಲೂಕು ಮಟ್ಟದಲ್ಲಿ ಪದಾಧಿಕಾರಿಗಳನ್ನು ನೇಮಿಸಲಾಗಿದೆ ಎಂದು ಸಭೆಯಲ್ಲಿ ತಿಳಿಸಲಾಯಿತು.

ಸಮಾಜದ ಶೈಕ್ಷಣಿಕ, ಸಾಮಾಜಿಕ ಹಾಗೂ ಆರ್ಥಿಕ ಪ್ರಗತಿಗೆ ಸಂಘಟಿತ ಪ್ರಯತ್ನಗಳು ಅಗತ್ಯವಾಗಿದ್ದು, ಸಮಾಜದ ಹಿರಿಯರ ಮಾರ್ಗದರ್ಶನದಲ್ಲಿ ಯುವಕರು ಸಕ್ರಿಯವಾಗಿ ಸಂಘಟನಾ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಬೇಕೆಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಬೆಳಿಗ್ಗೆ 10.30ಕ್ಕೆ ಆರಂಭವಾದ ಸಭೆಯಲ್ಲಿ ಸಮಾಜದ ಸುಮಾರು 40ರಿಂದ 50 ಮಂದಿ ಸದಸ್ಯರು, ಹಿರಿಯರು ಹಾಗೂ ಯುವಕರು ಭಾಗವಹಿಸಿದ್ದರು. ನೂತನವಾಗಿ ಆಯ್ಕೆಯಾದ ಪದಾಧಿಕಾರಿಗಳಿಗೆ ಸಮಾಜದ ಮುಖಂಡರು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಮೋಚಿಗಾರ ಸಮಾಜದ ಅಧ್ಯಕ್ಷ ಡಿ. ಭೀಮರಾಜ್, ಉಪಾಧ್ಯಕ್ಷ ಕೆ. ತೋಟಪ್ಪ, ಸಹ ಕಾರ್ಯದರ್ಶಿಗಳಾದ ಬಂಗಿ ಕಿರಣ್ ಕುಮಾರ್ ಮತ್ತು ದೇವಾನಂದ್ ದೇಗುಲಮಡಿ, ಖಜಾಂಚಿ ಕೆ. ರಾಜಕುಮಾರ್, ಸಂಚಾಲಕ ವೈ. ಯರಗಲ್ ನರಸಪ್ಪ, ಶಿವಮೂರ್ತಿ ಗುಡುಗುಂಟಿ ಸೇರಿದಂತೆ ಸಮಾಜದ ಹಿರಿಯರು, ಯುವಕರು ಹಾಗೂ ವಿವಿಧ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಮಾಜ ಸುಧಾರಣೆಗೆ ಸಮುದಾಯದ ಮುಖಂಡರ ಸಹಕಾರ ಅಗತ್ಯ: ಡಿವೈಎಸ್ಪಿ ಸುಲೇಮಾನ ಎಂ. ತಹಶೀಲ್ದಾರ್



ದೇವದುರ್ಗ: ಸಮಾಜದಲ್ಲಿ ಶಾಂತಿ, ಸುವ್ಯವಸ್ಥೆ ಕಾಪಾಡುವ ಜತೆಗೆ ಕಾನೂನುಬಾಹಿರ ಚಟುವಟಿಕೆಗಳನ್ನು ತಡೆಗಟ್ಟಲು ಪೊಲೀಸ್ ಇಲಾಖೆಯೊಂದಿಗೆ ಎಲ್ಲ ಸಮುದಾಯಗಳ ಮುಖಂಡರು ಸಹಕರಿಸುವುದು ಅತ್ಯಂತ ಅಗತ್ಯವಾಗಿದೆ ಎಂದು ನೂತನ ಡಿವೈಎಸ್ಪಿ ಸುಲೇಮಾನ ಎಂ. ತಹಶೀಲ್ದಾರ್ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ಭಾನುವಾರ ತಮ್ಮ ಅಧ್ಯಕ್ಷತೆಯಲ್ಲಿ ಆಯೋಜಿಸಿದ್ದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಸಮುದಾಯದ ಮುಖಂಡರ ಸಭೆಯಲ್ಲಿ ಅವರು ಮಾತನಾಡಿದರು.

ತಾಲೂಕಿನಲ್ಲಿ ನಡೆಯುತ್ತಿರುವ ವಿವಿಧ ಸಮಸ್ಯೆಗಳು, ಅಕ್ರಮ ಚಟುವಟಿಕೆಗಳು ಹಾಗೂ ಕಾನೂನು ಸುವ್ಯವಸ್ಥೆಗೆ ಸಂಬಂಧಿಸಿದ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಮಾಜದಲ್ಲಿ ಶಾಂತಿಯುತ ವಾತಾವರಣ ನಿರ್ಮಾಣವಾಗಬೇಕಾದರೆ ಪೊಲೀಸ್ ಇಲಾಖೆ ಮಾತ್ರವಲ್ಲದೆ ಸಾರ್ವಜನಿಕರು ಹಾಗೂ ಸಮುದಾಯದ ಮುಖಂಡರು ಸಹ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ತಾಲೂಕಿನ ಯಾವುದೇ ಭಾಗದಲ್ಲಿ ಅಕ್ರಮ ಅಥವಾ ಕಾನೂನುಬಾಹಿರ ಚಟುವಟಿಕೆಗಳು ನಡೆಯುತ್ತಿರುವುದು ಗಮನಕ್ಕೆ ಬಂದರೆ ತಕ್ಷಣ ಪೊಲೀಸ್ ಇಲಾಖೆಗೆ ಮಾಹಿತಿ ನೀಡಬೇಕು. ಅಪರಾಧ ಚಟುವಟಿಕೆಗಳನ್ನು ನಿಯಂತ್ರಿಸಲು ಸಾರ್ವಜನಿಕರಿಂದ ದೊರೆಯುವ ಮಾಹಿತಿ ಅತ್ಯಂತ ಮಹತ್ವದ್ದಾಗಿದೆ. ಸಮಾಜದ ಮುಖಂಡರು ತಮ್ಮ ಸಮುದಾಯಗಳಲ್ಲಿ ಕಾನೂನು ಅರಿವು ಮೂಡಿಸುವ ಮೂಲಕ ಶಾಂತಿ ಮತ್ತು ಸೌಹಾರ್ದತೆ ಕಾಪಾಡಲು ಮುಂದಾಗಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಮಾತನಾಡಿದ ರವಿಪ್ರಕಾಶ್, ಸಮಾಜದಲ್ಲಿನ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಪೊಲೀಸ್ ಇಲಾಖೆ ಮತ್ತು ಸಮುದಾಯದ ಮುಖಂಡರ ನಡುವೆ ಉತ್ತಮ ಸಮನ್ವಯ ಅಗತ್ಯವಾಗಿದೆ. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವ ನಿಟ್ಟಿನಲ್ಲಿ ಪರಸ್ಪರ ಸಹಕಾರ ಮುಖ್ಯ ಎಂದು ಅಭಿಪ್ರಾಯಪಟ್ಟರು.

ಮುಖಂಡ ಹನುಮಂತ ಮನ್ನಾಪುರಿ ಮಾತನಾಡಿ, ಕೆಲವು ಘಟನೆಗಳಲ್ಲಿ ಪೊಲೀಸ್ ಇಲಾಖೆ ನಿರ್ಲಕ್ಷ್ಯ ವಹಿಸುತ್ತಿದೆ ಎಂಬ ಆರೋಪಗಳು ಕೇಳಿಬರುತ್ತಿವೆ. ಇಂತಹ ಘಟನೆಗಳು ಮರುಕಳಿಸದಂತೆ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಸಾರ್ವಜನಿಕರಿಂದ ಬರುವ ದೂರುಗಳನ್ನು ಗಂಭೀರವಾಗಿ ಪರಿಗಣಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ಸಮುದಾಯದ ಮುಖಂಡರು ತಾಲೂಕಿನ ವಿವಿಧ ಸಮಸ್ಯೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದರು. ಪೊಲೀಸ್ ಇಲಾಖೆ ಮತ್ತು ಸಾರ್ವಜನಿಕರ ನಡುವೆ ಉತ್ತಮ ಬಾಂಧವ್ಯ ಬೆಳೆಸುವ ಅಗತ್ಯದ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಪಿಎಸ್‌ಐ ರಾಮನಾಥರೆಡ್ಡಿ, ಸಿಪಿಐ ಪುಂಡಲೀಕ ಪತ್ತಾರ, ಪೊಲೀಸ್ ಸಿಬ್ಬಂದಿ ಹಾಗೂ ಎಸ್ಸಿ, ಎಸ್ಟಿ ಸಮುದಾಯಗಳ ಮುಖಂಡರು ಉಪಸ್ಥಿತರಿದ್ದರು.



# ಅಕ್ರಮ ಫಿಲ್ಟರ್ ಮರಳು ದಂಧೆ ಆರೋಪ: ಅಧಿಕಾರಿಗಳ ಮೌನಕ್ಕೆ ಸಾರ್ವಜನಿಕರ ಆಕ್ರೋಶ




ರಾಯಚೂರು: ಜಿಲ್ಲೆಯ ದೇವದುರ್ಗ ತಾಲೂಕಿನ ಬೊಮ್ಮನಾಳ ಗ್ರಾಮದಲ್ಲಿ ಅಕ್ರಮ ಫಿಲ್ಟರ್ ಮರಳು ತಯಾರಿಕೆ ಹಾಗೂ ಸಾಗಾಟ ನಿರಂತರವಾಗಿ ನಡೆಯುತ್ತಿದೆ ಎಂಬ ಆರೋಪ ಕೇಳಿಬಂದಿದ್ದು, ಸಂಬಂಧಪಟ್ಟ ಇಲಾಖೆಗಳ ಕಾರ್ಯವೈಖರಿ ವಿರುದ್ಧ ಸ್ಥಳೀಯರು ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕುವಲ್ಲಿ ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಪೊಲೀಸ್ ಇಲಾಖೆ ವಿಫಲವಾಗಿವೆ ಎಂದು ಆರೋಪಿಸಲಾಗಿದೆ.

ಬೊಮ್ಮನಾಳ ಗ್ರಾಮ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಗಲು-ರಾತ್ರಿ ಎನ್ನದೆ ಫಿಲ್ಟರ್ ಮರಳು ದಂಧೆ ನಡೆಯುತ್ತಿದ್ದು, ವಿಶೇಷವಾಗಿ ರಾತ್ರಿಯ ವೇಳೆ ಬೃಹತ್ ಟಿಪ್ಪರ್‌ಗಳು ಮತ್ತು ಹಿಟಾಚಿ ಯಂತ್ರಗಳನ್ನು ಬಳಸಿಕೊಂಡು ಮರಳು ಸಾಗಿಸಲಾಗುತ್ತಿದೆ ಎಂದು ಸ್ಥಳೀಯರು ದೂರಿದ್ದಾರೆ. ಸಂಬಂಧಪಟ್ಟ ಇಲಾಖೆಗಳ ಅನುಮತಿ ಹಾಗೂ ನಿಯಮಗಳನ್ನು ಪಾಲಿಸದೆ ಮರಳು ಸಾಗಾಟ ನಡೆಸಲಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದೆ.

ಸಂಜೆ 6ರಿಂದ ಬೆಳಗ್ಗೆ 6 ಗಂಟೆಯವರೆಗೆ ಮರಳು ಸಾಗಾಟಕ್ಕೆ ಅವಕಾಶವಿಲ್ಲ ಎಂಬ ನಿಯಮವನ್ನು ಉಲ್ಲೇಖಿಸಿರುವ ಸ್ಥಳೀಯರು, ರಾತ್ರಿ ವೇಳೆಯಲ್ಲಿಯೂ ಟಿಪ್ಪರ್‌ಗಳ ಸಂಚಾರ ಮುಂದುವರಿದಿದೆ ಎಂದು ಆರೋಪಿಸಿದ್ದಾರೆ. ಈ ಕುರಿತು ಮಧ್ಯರಾತ್ರಿಯಲ್ಲಿ ವಿಡಿಯೋ ಚಿತ್ರೀಕರಿಸಿ ಪೊಲೀಸ್ ಇಲಾಖೆಗೆ ಮಾಹಿತಿ ನೀಡಿದರೂ ಅಕ್ರಮ ಚಟುವಟಿಕೆಗಳನ್ನು ತಡೆಯಲು ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಪೊಲೀಸರಿಗೆ ಮಾಹಿತಿ ನೀಡಿದ ನಂತರ ಅಧಿಕಾರಿಗಳು ಸ್ಥಳಕ್ಕೆ ತಲುಪುವಷ್ಟರಲ್ಲಿ ಮರಳು ಸಾಗಿಸುತ್ತಿದ್ದ ವಾಹನಗಳು ಹಾಗೂ ಯಂತ್ರೋಪಕರಣಗಳು ಅಲ್ಲಿಂದ ತೆರಳಿರುತ್ತವೆ. ಪದೇಪದೇ ಇಂತಹ ಘಟನೆಗಳು ನಡೆಯುತ್ತಿರುವುದರಿಂದ ದಂಧೆಯಲ್ಲಿ ತೊಡಗಿರುವವರಿಗೆ ಮುಂಚಿತವಾಗಿ ಮಾಹಿತಿ ಸಿಗುತ್ತಿದೆಯೇ ಎಂಬ ಅನುಮಾನ ಮೂಡುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಆದರೆ ಈ ಆರೋಪಗಳಿಗೆ ಸಂಬಂಧಿಸಿದಂತೆ ಅಧಿಕೃತ ತನಿಖೆಯಿಂದ ಯಾವುದೇ ದೃಢೀಕರಣ ಲಭ್ಯವಾಗಿಲ್ಲ.

ಜಿಲ್ಲೆಯಲ್ಲಿ ಅಕ್ರಮ ಮರಳುಗಾರಿಕೆ ನಿಯಂತ್ರಿಸುವ ಜವಾಬ್ದಾರಿ ಹೊಂದಿರುವ ಗಣಿ ಮತ್ತು ಭೂವಿಜ್ಞಾನ ಇಲಾಖೆ ಕಾರ್ಯನಿರ್ವಹಿಸುತ್ತಿದೆಯೇ ಎಂಬ ಪ್ರಶ್ನೆಯನ್ನು ಸಾರ್ವಜನಿಕರು ಮುಂದಿಟ್ಟಿದ್ದಾರೆ.

ಮರಳು ಸಾಗಾಟದ ಬಗ್ಗೆ ನಿರಂತರ ದೂರುಗಳು ಕೇಳಿಬರುತ್ತಿದ್ದರೂ ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಕಾನೂನು ಕ್ರಮ ಕೈಗೊಳ್ಳದಿರುವುದು ಏಕೆ ಎಂದು ಪ್ರಶ್ನಿಸಿದ್ದಾರೆ.

ದೇವದುರ್ಗ ಕ್ಷೇತ್ರದ ಶಾಸಕರು, ತಹಸೀಲ್ದಾರ್ ಹಾಗೂ ಪೊಲೀಸ್ ಇಲಾಖೆಯ ಗಮನಕ್ಕೆ ವಿಷಯ ತಂದಿದ್ದರೂ ಸಮಸ್ಯೆ ಬಗೆಹರಿದಿಲ್ಲ. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೂ ಮಾಹಿತಿ ನೀಡಲಾಗಿದೆ. ಆದರೂ ಅಕ್ರಮ ಮರಳು ಸಾಗಾಟಕ್ಕೆ ಪರಿಣಾಮಕಾರಿಯಾಗಿ ಕಡಿವಾಣ ಬಿದ್ದಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದಾರೆ.

ಅಕ್ರಮವಾಗಿ ಫಿಲ್ಟರ್ ಮರಳು ತಯಾರಿಸುವುದು ಮತ್ತು ಸಾಗಿಸುವುದರಿಂದ ಸರ್ಕಾರಕ್ಕೆ ರಾಜಸ್ವ ನಷ್ಟವಾಗುವ ಸಾಧ್ಯತೆಯ ಜತೆಗೆ ನೈಸರ್ಗಿಕ ಸಂಪನ್ಮೂಲಗಳ ಮೇಲೆಯೂ ದುಷ್ಪರಿಣಾಮ ಉಂಟಾಗಬಹುದು. ಆದ್ದರಿಂದ ಮರಳು ಸಾಗಾಟಕ್ಕೆ ಸಂಬಂಧಿಸಿದ ಪರವಾನಗಿ, ವಾಹನಗಳ ದಾಖಲೆ ಹಾಗೂ ಮರಳು ಸಂಗ್ರಹಣಾ ಸ್ಥಳಗಳನ್ನು ಪರಿಶೀಲಿಸಿ ಅಕ್ರಮ ಕಂಡುಬಂದಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ಈ ಕುರಿತು ಆಕ್ರೋಶ ವ್ಯಕ್ತಪಡಿಸಿರುವ ನಾಗರಾಜ್ ಮೇಟಿಗೌಡ, ಬೊಮ್ಮನಾಳ ಭಾಗದಲ್ಲಿ ನಡೆಯುತ್ತಿದೆ ಎನ್ನಲಾದ ಅಕ್ರಮ ಫಿಲ್ಟರ್ ಮರಳು ದಂಧೆಯನ್ನು ಕೂಡಲೇ ತಡೆಗಟ್ಟಬೇಕು. ಸಂಬಂಧಪಟ್ಟ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸಮಗ್ರ ತನಿಖೆ ನಡೆಸಬೇಕು. ದೂರುಗಳ ಬಗ್ಗೆ ನಿರ್ಲಕ್ಷ್ಯ ಮುಂದುವರಿದರೆ ಸಾರ್ವಜನಿಕರನ್ನು ಸಂಘಟಿಸಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದ್ದಾರೆ.

ಬೊಮ್ಮನಾಳದಲ್ಲಿ ಅಕ್ರಮ ಮರಳು ಸಾಗಾಟ ನಡೆಯುತ್ತಿದೆ ಎಂಬ ಆರೋಪಗಳ ಕುರಿತು ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಪೊಲೀಸ್ ಇಲಾಖೆಯಿಂದ ಸಮಗ್ರ ಪರಿಶೀಲನೆ ನಡೆಸಿ ವಾಸ್ತವಾಂಶವನ್ನು ಸಾರ್ವಜನಿಕರಿಗೆ ತಿಳಿಸಬೇಕೆಂಬ ಆಗ್ರಹ ಕೇಳಿಬಂದಿದೆ.

# ಪರಿಸರ ಸಂರಕ್ಷಣೆಯ ಮೂಲಕ ದಸರಾ ಆಯುಧ ಪೂಜೆ ಆಚರಿಸಿದ ನಿವೃತ್ತ ನೌಕರರು



ರಾಯಚೂರು: ನಾಡಹಬ್ಬ ದಸರಾ ಆಯುಧ ಪೂಜೆಯ ಅಂಗವಾಗಿ ಕರ್ನಾಟಕ ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾ ಘಟಕದ ವತಿಯಿಂದ ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆಯ ಸಂದೇಶ ಸಾರಲಾಯಿತು.

ನಗರದ ಬೋಳಮಾನದೊಡ್ಡಿ ರಸ್ತೆಯ ತುಳಜಾ ಭವಾನಿ ದೇವಸ್ಥಾನದ ರಸ್ತೆಯಲ್ಲಿರುವ ಸಂಘದ ಜಿಲ್ಲಾ ಕಚೇರಿ ಆವರಣದಲ್ಲಿ ಆರೋಗ್ಯ ಇಲಾಖೆಯ ನಿವೃತ್ತ ಅಧಿಕಾರಿ ಪ್ರಭಣ್ಣಗೌಡ ಹಂಚಿನಾಳ ಅವರ ಆಶಯದಂತೆ ಸಂಘದ ಅಧ್ಯಕ್ಷ ಎಸ್. ಶಂಕರಗೌಡ ಅವರ ನೇತೃತ್ವದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗ್ರೀನ್ ರಾಯಚೂರು ಸಂಸ್ಥೆಯ ಮುಖ್ಯಸ್ಥ ರಾಜೇಂದ್ರ ಶಿವಾಳೆ ಮಾತನಾಡಿ, ದಸರಾ ಆಯುಧ ಪೂಜೆಯಂತಹ ಶುಭ ಸಂದರ್ಭದಲ್ಲಿ ನಿವೃತ್ತ ಸರ್ಕಾರಿ ನೌಕರರು ಸಸಿ ನೆಡುವ ಮೂಲಕ ಪ್ರಕೃತಿಯ ಆರಾಧನೆಗೆ ಮುಂದಾಗಿರುವುದು ಮಾದರಿ ಕಾರ್ಯವಾಗಿದೆ. ಹಬ್ಬದ ಆಚರಣೆಯೊಂದಿಗೆ ಪರಿಸರ ಸಂರಕ್ಷಣೆಗೆ ಆದ್ಯತೆ ನೀಡಿರುವುದು ಸಮಾಜಕ್ಕೆ ಉತ್ತಮ ಸಂದೇಶ ನೀಡುತ್ತದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇತ್ತೀಚಿನ ವರ್ಷಗಳಲ್ಲಿ ಮಳೆಯ ಕೊರತೆ ಹಾಗೂ ಬರಗಾಲದ ಪರಿಣಾಮ ಅಂತರ್ಜಲ ಮಟ್ಟ ಕುಸಿಯುತ್ತಿದ್ದು, ಕುಡಿಯುವ ನೀರಿನ ಸಮಸ್ಯೆ ದಿನದಿಂದ ದಿನಕ್ಕೆ ಗಂಭೀರವಾಗುತ್ತಿದೆ. ನೀರಿನ ಬೆಲೆಯೂ ಹೆಚ್ಚಾಗುತ್ತಿರುವುದರಿಂದ ಪ್ರತಿಯೊಬ್ಬರೂ ನೀರಿನ ಮಿತಬಳಕೆಗೆ ಮುಂದಾಗಬೇಕು. ಇಂದಿನಿಂದಲೇ ನೀರಿನ ಸಂರಕ್ಷಣೆಗೆ ಗಮನಹರಿಸದಿದ್ದರೆ ಮುಂದಿನ ಪೀಳಿಗೆ ತೀವ್ರ ಸಂಕಷ್ಟ ಎದುರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ಮನೆಗಳು, ಸಾರ್ವಜನಿಕ ಸ್ಥಳಗಳು ಹಾಗೂ ಮಾರುಕಟ್ಟೆ ಪ್ರದೇಶಗಳಲ್ಲಿ ನೀರಿನ ಕೊಳವೆಗಳು ಸೋರಿಕೆಯಾಗುತ್ತಿದ್ದರೆ ತಕ್ಷಣ ದುರಸ್ತಿಗೊಳಿಸಬೇಕು. ಅನಗತ್ಯವಾಗಿ ನೀರು ವ್ಯರ್ಥವಾಗುವುದನ್ನು ತಡೆಗಟ್ಟುವ ಮೂಲಕ ಅಮೂಲ್ಯ ಜಲಸಂಪನ್ಮೂಲವನ್ನು ಉಳಿಸಬಹುದು. ಪರಿಸರ ಸಂರಕ್ಷಣೆ ಮತ್ತು ನೀರಿನ ಉಳಿತಾಯ ಪ್ರತಿಯೊಬ್ಬ ನಾಗರಿಕನ ಕರ್ತವ್ಯವಾಗಬೇಕು ಎಂದು ತಿಳಿಸಿದರು.

ಸಂಘದ ಅಧ್ಯಕ್ಷ ಎಸ್. ಶಂಕರಗೌಡ ಮಾತನಾಡಿ, ಆಯುಧ ಪೂಜೆಯ ಸಂದರ್ಭದಲ್ಲಿ ಪರಿಸರಕ್ಕೆ ಕೊಡುಗೆ ನೀಡುವ ಉದ್ದೇಶದಿಂದ ಸಸಿ ನೆಡುವ ಕಾರ್ಯಕ್ರಮ ಆಯೋಜಿಸುವ ಪ್ರಸ್ತಾವನೆಯನ್ನು ಪ್ರಭಣ್ಣಗೌಡ ಹಂಚಿನಾಳ ಅವರು ಮುಂದಿಟ್ಟಾಗ ಸಂತೋಷದಿಂದ ಒಪ್ಪಿಕೊಂಡೆವು. ಒಂದು ಸಸಿಯನ್ನು ನೆಟ್ಟು ಅದನ್ನು ಜವಾಬ್ದಾರಿಯಿಂದ ಪೋಷಿಸಿದರೆ ಭವಿಷ್ಯದಲ್ಲಿ ಅದು ದೊಡ್ಡ ಮರವಾಗಿ ಅನೇಕ ಜೀವಿಗಳಿಗೆ ಆಶ್ರಯ ನೀಡುತ್ತದೆ ಎಂದು ಹೇಳಿದರು.

ಮರಗಳು ಮನುಷ್ಯನಿಗೆ ನೆರಳು, ಹಣ್ಣು, ಹೂವು ಹಾಗೂ ಶುದ್ಧ ಗಾಳಿಯನ್ನು ನೀಡುವುದರೊಂದಿಗೆ ಪಕ್ಷಿ, ಪ್ರಾಣಿಗಳಿಗೂ ಆಶ್ರಯವಾಗುತ್ತವೆ. ಆದ್ದರಿಂದ ಸಸಿ ನೆಡುವುದಕ್ಕೆ ಮಾತ್ರ ಸೀಮಿತವಾಗದೆ ಅವುಗಳನ್ನು ಬೆಳೆಸಿ ಸಂರಕ್ಷಿಸುವ ಮನೋಭಾವ ಪ್ರತಿಯೊಬ್ಬರಲ್ಲಿಯೂ ಮೂಡಬೇಕು ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು ಹಾಗೂ ನಿವೃತ್ತ ನೌಕರರು ಒಗ್ಗೂಡಿ ಬಾದಾಮಿ ಸಸಿಯನ್ನು ನೆಟ್ಟು ಅದಕ್ಕೆ 'ಶಾಂಭವಿ' ಎಂದು ನಾಮಕರಣ ಮಾಡಿದರು. ಬಳಿಕ ಸಸಿಗೆ ನೀರುಣಿಸಿ ಅದರ ಸಂರಕ್ಷಣೆಗೆ ಸಂಕಲ್ಪ ಮಾಡಿದರು.

ಕಾರ್ಯಕ್ರಮದಲ್ಲಿ ಸಂಘದ ಗೌರವಾಧ್ಯಕ್ಷ ಮಹಾದೇವಪ್ಪ ಏಗನೂರು, ಕಾರ್ಯದರ್ಶಿ ವಿಶ್ವನಾಥರೆಡ್ಡಿ, ಖಜಾಂಚಿ ಮಲ್ಲಯ್ಯ ಕಲ್ಲೂರು, ಸಂಘಟನಾ ಕಾರ್ಯದರ್ಶಿ ಪ್ರಭಣ್ಣಗೌಡ, ಕಾರ್ಯದರ್ಶಿ ಶಿರಾಜ್ ಅಹ್ಮದ್, ಸದಸ್ಯರಾದ ಎ. ರಾಮುಲು, ವಿಜಯಲಕ್ಷ್ಮೀ, ಹಮೀದ್ ಸಾಬ್, ಶ್ರೀನಿವಾಸರಾವ್ ಕೆ.ಎನ್., ಡೇವಿಡ್ ವಿಶ್ವನಾಥ ಕಾಲೋನಿ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ನಿವೃತ್ತ ನೌಕರರು ಉಪಸ್ಥಿತರಿದ್ದರು.

# ಭಿಕ್ಷಾಟನೆ ಮುಕ್ತ ಸಮಾಜ ನಿರ್ಮಾಣಕ್ಕೆ ಸಾರ್ವಜನಿಕರ ಸಹಕಾರ ಅಗತ್ಯ: ಸಾಯಿ ಕಿರಣ್ ಆದೋನಿ




ರಾಯಚೂರು: ಭಿಕ್ಷಾಟನೆಯಲ್ಲಿ ತೊಡಗಿರುವ ನಿರ್ಗತಿಕರನ್ನು ಸಮಾಜದ ಮುಖ್ಯವಾಹಿನಿಗೆ ಕರೆತಂದು ಸ್ವಾವಲಂಬಿ ಜೀವನ ನಡೆಸಲು ಅವಕಾಶ ಕಲ್ಪಿಸುವುದು ಸರ್ಕಾರದ ಜತೆಗೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಓಂ ಸಾಯಿ ಧ್ಯಾನ ಮಂದಿರದ ಸಂಸ್ಥಾಪಕ ಧರ್ಮಾಧಿಕಾರಿ ಸಾಯಿ ಕಿರಣ್ ಆದೋನಿ ಹೇಳಿದರು.

ನಗರದ ಓಂ ಸಾಯಿ ಧ್ಯಾನ ಮಂದಿರದಲ್ಲಿ ಕರ್ನಾಟಕ ಸರ್ಕಾರದ ಆದೇಶದನ್ವಯ ಸಮಾಜ ಕಲ್ಯಾಣ ಇಲಾಖೆಯ ಕೇಂದ್ರ ಪರಿಹಾರ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಭಿಕ್ಷಾಟನೆ ನಿಷೇಧ ಹಾಗೂ ಪುನರ್ವಸತಿ ಜಾಗೃತಿ ಪೋಸ್ಟರ್ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಮಾಜದಲ್ಲಿ ಭಿಕ್ಷಾಟನೆ ಸಮಸ್ಯೆಯನ್ನು ನಿವಾರಿಸಲು ಕೇವಲ ಕಾನೂನು ಕ್ರಮಗಳಿಂದ ಸಾಧ್ಯವಿಲ್ಲ. ನಿರ್ಗತಿಕರಿಗೆ ಮಾನವೀಯ ನೆಲೆಯಲ್ಲಿ ನೆರವು ನೀಡುವುದರ ಜತೆಗೆ ಅವರಿಗೆ ಸೂಕ್ತ ಪುನರ್ವಸತಿ, ಉದ್ಯೋಗಾವಕಾಶ ಹಾಗೂ ಸ್ವಾವಲಂಬಿ ಬದುಕಿಗೆ ಅಗತ್ಯವಾದ ಸೌಲಭ್ಯಗಳನ್ನು ಕಲ್ಪಿಸಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರು ಸರ್ಕಾರದ ಯೋಜನೆಗಳ ಕುರಿತು ಅರಿವು ಹೊಂದಿ ಸಹಕಾರ ನೀಡಬೇಕು ಎಂದು ತಿಳಿಸಿದರು.

ಭಿಕ್ಷಾಟನೆಯಲ್ಲಿ ತೊಡಗಿರುವ ವ್ಯಕ್ತಿಗಳನ್ನು ಗುರುತಿಸಿ ಅವರಿಗೆ ಗೌರವಯುತ ಪುನರ್ವಸತಿ ಕಲ್ಪಿಸುವುದು, ಕೌಶಲ್ಯ ತರಬೇತಿ ನೀಡುವುದು, ಜೀವನೋಪಾಯಕ್ಕೆ ನೆರವು ಒದಗಿಸುವುದು ಹಾಗೂ ಆಪ್ತಸಮಾಲೋಚನೆಯ ಮೂಲಕ ಸಮಾಜದ ಮುಖ್ಯವಾಹಿನಿಗೆ ಕರೆತರುವುದು ಈ ಅಭಿಯಾನದ ಪ್ರಮುಖ ಉದ್ದೇಶವಾಗಿದೆ ಎಂದು ವಿವರಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ನಿರಾಶ್ರಿತರ ಕೇಂದ್ರದ ವಾರ್ಡನ್ ಆದೇಶ್ ಅವರು ಭಿಕ್ಷಾಟನೆ ತಡೆಗಟ್ಟುವಿಕೆ ಹಾಗೂ ನಿರ್ಗತಿಕರ ಪುನರ್ವಸತಿ ಕುರಿತು ಜಾಗೃತಿ ಮೂಡಿಸಿದರು. ಬಳಿಕ ಸಾಯಿ ಕಿರಣ್ ಆದೋನಿ ಅವರ ಸಾನ್ನಿಧ್ಯದಲ್ಲಿ ಭಿಕ್ಷಾಟನೆ ನಿಷೇಧ ಮತ್ತು ಪುನರ್ವಸತಿ ಕುರಿತ ಜಾಗೃತಿ ಪೋಸ್ಟರ್ ಗಳನ್ನು ಬಿಡುಗಡೆ ಮಾಡಲಾಯಿತು.

ಸಾರ್ವಜನಿಕರು ಎಲ್ಲಿಯಾದರೂ ಭಿಕ್ಷಾಟನೆಯಲ್ಲಿ ತೊಡಗಿರುವ ನಿರ್ಗತಿಕರು ಅಥವಾ ನಿರಾಶ್ರಿತರನ್ನು ಕಂಡಲ್ಲಿ ಸಂಬಂಧಪಟ್ಟ ಇಲಾಖೆಯ ಟೋಲ್‌ಫ್ರೀ ಸಂಖ್ಯೆ 10581 ಅಥವಾ ಸಹಾಯವಾಣಿ ಸಂಖ್ಯೆ 94823 00400ಕ್ಕೆ ಕರೆ ಮಾಡಿ ಮಾಹಿತಿ ನೀಡುವಂತೆ ಮನವಿ ಮಾಡಲಾಯಿತು.

ಓಂ ಸಾಯಿ ಧ್ಯಾನ ಮಂದಿರವು ಆಧ್ಯಾತ್ಮಿಕ ಚಟುವಟಿಕೆಗಳೊಂದಿಗೆ ಅನ್ನದಾನ, ಮಾನವೀಯ ಸೇವೆ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳನ್ನು ನಡೆಸುವ ಮೂಲಕ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದೆ ಎಂದು ತಿಳಿಸಲಾಯಿತು.

ಈ ಸಂದರ್ಭದಲ್ಲಿ ಇರ್ಷಾದ್ ಮಿಯಾ, ಜಮ್ಲಪ್ಪ, ವೀರೇಶ್, ತಾಯಿರಾಜ್, ರಜಿಯಾ ಬೇಗಂ, ಲಕ್ಷ್ಮಿ ಸೇರಿದಂತೆ ಸಾಯಿ ಭಕ್ತರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

# ಅ.26ರಂದು ವಾಲ್ಮೀಕಿ ಮಹರ್ಷಿ ಜಯಂತಿ ಅರ್ಥಪೂರ್ಣ ಆಚರಣೆಗೆ ಸಿದ್ಧತೆ: ತಹಸೀಲ್ದಾರ್ ಭೀಮರಾಯ



ಮಾನ್ವಿ: ತಾಲೂಕು ಆಡಳಿತದ ವತಿಯಿಂದ ಅಕ್ಟೋಬರ್ 26ರಂದು ಶ್ರೀ ವಾಲ್ಮೀಕಿ ಮಹರ್ಷಿಗಳ ಜಯಂತಿಯನ್ನು ವಿವಿಧ ಕಾರ್ಯಕ್ರಮಗಳೊಂದಿಗೆ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ತಹಸೀಲ್ದಾರ್ ಭೀಮರಾಯ ಬಿ. ರಾಮಸಮುದ್ರ ತಿಳಿಸಿದರು.

ಪಟ್ಟಣದ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಶ್ರೀ ವಾಲ್ಮೀಕಿ ಮಹರ್ಷಿ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ ಪಟ್ಟಣದ ವಾಲ್ಮೀಕಿ ವೃತ್ತದಲ್ಲಿರುವ ಮಹರ್ಷಿ ವಾಲ್ಮೀಕಿ ಅವರ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಲಾಗುವುದು. ಬಳಿಕ ಮಹರ್ಷಿಗಳ ಭಾವಚಿತ್ರವನ್ನು ಸಾರೋಟಿನಲ್ಲಿ ಇರಿಸಿ ಪಟ್ಟಣದ ಪ್ರಮುಖ ಬೀದಿಗಳ ಮೂಲಕ ತಹಸೀಲ್ದಾರ್ ಕಚೇರಿಯವರೆಗೆ ಭವ್ಯ ಮೆರವಣಿಗೆ ನಡೆಸಲಾಗುವುದು ಎಂದು ವಿವರಿಸಿದರು.

ಮೆರವಣಿಗೆಯ ನಂತರ ನಡೆಯುವ ವೇದಿಕೆ ಕಾರ್ಯಕ್ರಮದಲ್ಲಿ ವಾಲ್ಮೀಕಿ ಮಹರ್ಷಿಗಳ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಗುವುದು. ಮಹರ್ಷಿಗಳ ಜೀವನ, ಆದರ್ಶಗಳು ಹಾಗೂ ತತ್ವಗಳ ಕುರಿತು ವಿಶೇಷ ಉಪನ್ಯಾಸ ಏರ್ಪಡಿಸಲಾಗುವುದು. ಅಲ್ಲದೆ, ಸಮುದಾಯದ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಸನ್ಮಾನಿಸುವುದರ ಜತೆಗೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು ಎಂದು ತಿಳಿಸಿದರು.

ವಾಲ್ಮೀಕಿ ಮಹರ್ಷಿಗಳ ಜಯಂತಿಯು ಸರ್ಕಾರಿ ಕಾರ್ಯಕ್ರಮವಾಗಿರುವುದರಿಂದ ತಾಲೂಕಿನ ಎಲ್ಲ ಸರ್ಕಾರಿ ಕಚೇರಿಗಳಲ್ಲಿ ಕಡ್ಡಾಯವಾಗಿ ಆಚರಿಸಬೇಕು. ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕು. ಸಮುದಾಯದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ತಾಲೂಕು ಪರಿಶಿಷ್ಟ ಪಂಗಡಗಳ ಕಲ್ಯಾಣಾಧಿಕಾರಿ ಭಾಗಯ್ಯ ನಾಯಕ ಜಯಂತಿ ಆಚರಣೆಯ ಸಿದ್ಧತೆಗಳು ಹಾಗೂ ಕಾರ್ಯಕ್ರಮಗಳ ರೂಪುರೇಷೆಗಳ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ವಾಲ್ಮೀಕಿ ಸಮುದಾಯದ ಮುಖಂಡ ಹನುಮೇಶ ನಾಯಕ ಸದಾಪುರ, ಮಾನ್ವಿ ವಿಧಾನಸಭಾ ಕ್ಷೇತ್ರವು ಪರಿಶಿಷ್ಟ ಪಂಗಡಕ್ಕೆ ಮೀಸಲಾಗಿದ್ದರೂ ಸಮುದಾಯದ ಮೂಲಸೌಕರ್ಯಗಳ ಅಭಿವೃದ್ಧಿಗೆ ಸಂಬಂಧಿಸಿದ ಬೇಡಿಕೆಗಳು ಇನ್ನೂ ಈಡೇರಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಮುದಾಯದ ಅನುಕೂಲಕ್ಕಾಗಿ ವಾಲ್ಮೀಕಿ ಸಮುದಾಯ ಭವನ ನಿರ್ಮಾಣ ಹಾಗೂ ವಾಲ್ಮೀಕಿ ವೃತ್ತದ ಅಭಿವೃದ್ಧಿ ಸೇರಿದಂತೆ ಹಲವು ಬೇಡಿಕೆಗಳನ್ನು ಅಧಿಕಾರಿಗಳ ಗಮನಕ್ಕೆ ತಂದಿದ್ದರೂ ಸಮರ್ಪಕ ಸ್ಪಂದನೆ ದೊರೆತಿಲ್ಲ ಎಂದು ಆರೋಪಿಸಿದರು. ಈ ಬೇಡಿಕೆಗಳನ್ನು ಆದ್ಯತೆಯ ಮೇರೆಗೆ ಪರಿಗಣಿಸಿ ಅಗತ್ಯ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಖಾಲೀದ್ ಅಹಮ್ಮದ್, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ, ಪುರಸಭೆ ಮುಖ್ಯಾಧಿಕಾರಿ ಪರಶುರಾಮ್ ಬಿ. ದೇವಮಾನೆ, ಪೊಲೀಸ್ ಇನ್‌ಸ್ಪೆಕ್ಟರ್ ಸೋಮಶೇಖರ ಎಸ್. ಕೆಂಚರೆಡ್ಡಿ, ತಾಲೂಕು ಆರೋಗ್ಯಾಧಿಕಾರಿ ಡಾ. ಶರಣಬಸವರಾಜ ಉಪಸ್ಥಿತರಿದ್ದರು.

ಸಮುದಾಯದ ಮುಖಂಡರಾದ ಮಾಜಿ ಎಪಿಎಂಸಿ ಸದಸ್ಯ ಶಿವರಾಜ್ ನಾಯಕ, ಬುಡ್ಡಪ್ಪ ನಾಯಕ, ಅಯ್ಯಪ್ಪ ನಾಯಕ ಮ್ಯಾಕಲ್, ಶರಣಬಸವ ನಾಯಕ, ರಾಮಣ್ಣ ನಾಯಕ, ಅಮರೇಶ ನಾಯಕ, ಆಂಜನೇಯ ನಾಯಕ, ಹನುಮೇಶ ನಾಯಕ ಸದಾಪುರ, ಅಂಬಣ್ಣ ನಾಯಕ, ರಮೇಶ್ ನಾಯಕ್, ಚಂದ್ರು, ಮೌನೇಶ ನಾಯಕ ಸೇರಿದಂತೆ ಹಲವರು ಸಭೆಯಲ್ಲಿ ಭಾಗವಹಿಸಿದ್ದರು.

# ಮುಂದಿನ ಪೀಳಿಗೆಗೆ ದೇಸಿ ಕಲೆಗಳನ್ನು ಉಳಿಸಿ ಬೆಳೆಸುವುದು ಅಗತ್ಯ: ಡಾ. ಬಸವರಾಜ ಕಳಸ

ರಾಯಚೂರು, ಅ.19: ಆಧುನಿಕತೆಯ ಪ್ರಭಾವದಿಂದ ಮರೆಯಾಗುತ್ತಿರುವ ನಾಡಿನ ದೇಸಿ ಕಲೆಗಳು ಹಾಗೂ ಸಾಂಸ್ಕೃತಿಕ ಪರಂಪರೆಯನ್ನು ಉಳಿಸಿ ಮುಂದಿನ ಪೀಳಿಗೆಗೆ ಪರಿಚಯಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ವಿಶೇಷವಾಗಿ ಯುವಜನರಲ್ಲಿ ದೇಸಿ ಕಲೆಗಳ ಬಗ್ಗೆ ಆಸಕ್ತಿ ಮತ್ತು ಜಾಗೃತಿ ಮೂಡಿಸುವ ಕಾರ್ಯಕ್ರಮಗಳು ಹೆಚ್ಚಿನ ಸಂಖ್ಯೆಯಲ್ಲಿ ನಡೆಯಬೇಕು ಎಂದು ಹೋರಾಟಗಾರ ಹಾಗೂ ಸಮಾಜ ಸೇವಕ ಡಾ. ಬಸವರಾಜ ಕಳಸ ಅಭಿಪ್ರಾಯಪಟ್ಟರು.

ನಗರದ ಮನರಂಜನಾ ಕೇಂದ್ರದಲ್ಲಿ ಭಾನುವಾರ ಸಂಜೆ ಮೇಘ ಕಲಾ ನಿಕೇತನ ಸಂಸ್ಥೆಯ ವತಿಯಿಂದ ಆಯೋಜಿಸಿದ್ದ ದಸರಾ ಸಂಭ್ರಮ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭರತನಾಟ್ಯ, ಕುಚಿಪುಡಿ, ತೊಗಲುಗೊಂಬೆಯಾಟ, ಜಾನಪದ ನೃತ್ಯ, ಜಾನಪದ ಗೀತೆಗಳು, ಭಾವಗೀತೆಗಳು, ಯಕ್ಷಗಾನ ಹಾಗೂ ಬಯಲಾಟದಂತಹ ಕಲೆಗಳು ನಮ್ಮ ನಾಡಿನ ಶ್ರೀಮಂತ ಸಾಂಸ್ಕೃತಿಕ ಪರಂಪರೆಯ ಪ್ರತೀಕಗಳಾಗಿವೆ. ಇಂತಹ ಕಲೆಗಳು ಆಧುನಿಕ ಜೀವನಶೈಲಿಯ ಪ್ರಭಾವದಿಂದ ಕ್ರಮೇಣ ಜನರಿಂದ ದೂರವಾಗುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇವುಗಳನ್ನು ಉಳಿಸಿ ಬೆಳೆಸಲು ಸಾಂಸ್ಕೃತಿಕ ಸಂಘಟನೆಗಳು ಮುಂದಾಗಬೇಕು. ಮೇಘ ಕಲಾ ನಿಕೇತನ ಸಂಸ್ಥೆಯು ದಸರಾ ಸಂಭ್ರಮದ ಮೂಲಕ ಕಲಾವಿದರಿಗೆ ವೇದಿಕೆ ಕಲ್ಪಿಸಿರುವುದು ಶ್ಲಾಘನೀಯ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಡಾ. ಶಾಮಣ್ಣ ಮಾಚನೂರು ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮೇಘ ಕಲಾ ನಿಕೇತನ ಸಂಸ್ಥೆಯ ಉಪಾಧ್ಯಕ್ಷೆ ಮೇಘ ಅವರು ಸಂಸ್ಥೆಯ ಬೆಳವಣಿಗೆ, ಚಟುವಟಿಕೆಗಳು ಹಾಗೂ ಮುಂದಿನ ಗುರಿಗಳ ಕುರಿತು ವಿವರಿಸಿದರು.




ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವೆಂಕಟೇಶ್ ಆಲ್ಕೋಡ್ ಹಾಗೂ ಸೇತುಮಾಧವ ಸಂಗೀತ ಸಹಕಾರ ನೀಡಿದರು. ಗಾಯಕರಾದ ಮೇಘ, ಜಾನ್ಸಿ ರಾಣಿ, ಶ್ರೀಗೌರಿ ಪಲ್ಲಕ್ಕಿ, ರಾಜಶೇಖರ್, ಚಿರಂಜೀವಿ ಯಾದವ್, ವಾಸುಕಿ, ಕರುಣಮ್, ಶೈಲಜಾ, ಸಂಗೀತ ಹಾಗೂ ಶಾಂತಪ್ಪ ಅವರು ವಿವಿಧ ಗೀತೆಗಳನ್ನು ಹಾಡಿ ಪ್ರೇಕ್ಷಕರನ್ನು ರಂಜಿಸಿದರು. ಶ್ರೀಗೌರಿ ಪಲ್ಲಕ್ಕಿ ಅವರ ಭರತನಾಟ್ಯ ಪ್ರದರ್ಶನ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು.

ಇದೇ ಸಂದರ್ಭದಲ್ಲಿ ಸಮಾಜ ಸೇವಕರಾದ ಭಾರತೀ ಮಸ್ಕಿ ಹಾಗೂ ತುಳಸಿ ಯಾದವ್ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು. ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 17 ಮಂದಿ ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಕಾರ್ಯಕ್ರಮದಲ್ಲಿ ನಗರ ಬಿಜೆಪಿ ಘಟಕದ ಅಧ್ಯಕ್ಷ ಪೆಪ್ಸಿ ಗೋವಿಂದ, ಕಾಂಗ್ರೆಸ್ ಮುಖಂಡ ಸತ್ಯನಾಥ, ಉದ್ಯಮಿ ವೀರೇಂದ್ರ ಪಾಟೀಲ್ ಹರವಿ, ಬಿಜೆಪಿ ಮುಖಂಡ ಕರಿಯಪ್ಪ ನಾಯಕ, ಎಂ. ನರೇಂದ್ರ ಸೇರಿದಂತೆ ಹಲವು ಗಣ್ಯರು ಭಾಗವಹಿಸಿದ್ದರು.

ಆರಂಭದಲ್ಲಿ ಮಾರುತಿ ಬಡಿಗೇರ್ ಸ್ವಾಗತಿಸಿದರು. ಕಲಾವಿದರು, ಕಲಾಭಿಮಾನಿಗಳು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ದಸರಾ ಸಂಭ್ರಮಕ್ಕೆ ಸಾಕ್ಷಿಯಾದರು.

# ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ಅಧ್ಯಕ್ಷರಾಗಿ ಪದ್ಮಾ ಸಜ್ಜನ್, ಪ್ರಧಾನ ಕಾರ್ಯದರ್ಶಿಯಾಗಿ ಸರಸ್ವತಿ ಆಯ್ಕೆ



ಸಿಂಧನೂರು: ಕರ್ನಾಟಕ ರಾಜ್ಯ ಸರ್ಕಾರಿ ಮಹಿಳಾ ನೌಕರರ ಸಂಘದ ನೂತನ ಅಧ್ಯಕ್ಷರಾಗಿ ಪದವೀಧರ ಶಿಕ್ಷಣ ಇಲಾಖೆಯ ಪದ್ಮಾ ಸಜ್ಜನ್ ಹಾಗೂ ಪ್ರಧಾನ ಕಾರ್ಯದರ್ಶಿಯಾಗಿ ಸರಸ್ವತಿ ಬಾಯಪ್ಪ ಕಡ್ಡೋಣಿ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಸಂಘದ ಜಿಲ್ಲಾ ಘಟಕದ ಅಧ್ಯಕ್ಷೆ ಜಯಶ್ರೀ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಸರ್ಕಾರಿ ಸೇವೆಯಲ್ಲಿರುವ ಮಹಿಳಾ ನೌಕರರ ಸಂಘಟನೆಯನ್ನು ಬಲಪಡಿಸುವ ಹಾಗೂ ಅವರ ಸಮಸ್ಯೆಗಳಿಗೆ ಸ್ಪಂದಿಸುವ ಉದ್ದೇಶದಿಂದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಸಂಘದ ಗೌರವಾಧ್ಯಕ್ಷರಾಗಿ ಸ್ತ್ರೀಶಕ್ತಿ ಗುಂಪಿನ ಶ್ರೀದೇವಿ, ಖಜಾಂಚಿಯಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸುವರ್ಣ, ರಾಜ್ಯ ಪರಿಷತ್ ಸದಸ್ಯರಾಗಿ ಆರೋಗ್ಯ ಇಲಾಖೆಯ ಸುನಿತಾ ಪಾಟೀಲ್ ಅವರನ್ನು ಆಯ್ಕೆ ಮಾಡಲಾಗಿದೆ.

ಹಿರಿಯ ಉಪಾಧ್ಯಕ್ಷರಾಗಿ ಕಾರ್ಮಿಕ ಇಲಾಖೆಯ ವಿಜಯಲಕ್ಷ್ಮಿ ಹಾಗೂ ಪ್ರೌಢ ಶಿಕ್ಷಣ ಇಲಾಖೆಯ ಗಿರಿಜಾ, ಉಪಾಧ್ಯಕ್ಷರಾಗಿ ಪ್ರೌಢ ಶಿಕ್ಷಣ ಇಲಾಖೆಯ ಮಹಾದೇವಿ, ಪ್ರಾಥಮಿಕ ಶಿಕ್ಷಣ ಇಲಾಖೆಯ ಆಶಾ ಎಸ್. ಕೆ., ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವಿದ್ಯಾ ಹಿರೇಮಠ ಹಾಗೂ ಪದವೀಧರ ಶಿಕ್ಷಣ ಇಲಾಖೆಯ ಸಾವಿತ್ರಿ ಅವರನ್ನು ನೇಮಕ ಮಾಡಲಾಗಿದೆ ಎಂದು ವಿವರಿಸಿದ್ದಾರೆ.

ನೂತನವಾಗಿ ಆಯ್ಕೆಯಾದ ಎಲ್ಲ ಪದಾಧಿಕಾರಿಗಳು ಸಂಘದ ಕಾರ್ಯಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಮಹಿಳಾ ನೌಕರರ ಹಿತಾಸಕ್ತಿ ಕಾಪಾಡಲು ಶ್ರಮಿಸಬೇಕು. ನೌಕರರ ಸಮಸ್ಯೆಗಳಿಗೆ ಸ್ಪಂದಿಸುವುದರೊಂದಿಗೆ ಸಂಘಟನೆಯ ಬಲವರ್ಧನೆಗೆ ಆದ್ಯತೆ ನೀಡಬೇಕು ಎಂದು ಜಯಶ್ರೀ ಕರೆ ನೀಡಿದ್ದಾರೆ.

ಮಹಿಳಾ ನೌಕರರ ನಡುವೆ ಪರಸ್ಪರ ಸಹಕಾರ, ಒಗ್ಗಟ್ಟು ಹಾಗೂ ಸಂಘಟನಾ ಮನೋಭಾವ ಬೆಳೆಸುವ ಮೂಲಕ ಸಂಘವನ್ನು ಮತ್ತಷ್ಟು ಕ್ರಿಯಾಶೀಲಗೊಳಿಸುವ ಅಗತ್ಯವಿದೆ ಎಂದು ತಿಳಿಸಿದ್ದಾರೆ.

ನೂತನವಾಗಿ ಆಯ್ಕೆಯಾದ ಅಧ್ಯಕ್ಷರು, ಪ್ರಧಾನ ಕಾರ್ಯದರ್ಶಿ ಸೇರಿದಂತೆ ಎಲ್ಲ ಪದಾಧಿಕಾರಿಗಳಿಗೆ ಸಿಂಧನೂರು ತಾಲೂಕು ಘಟಕದ ಅಧ್ಯಕ್ಷ ಹಾಗೂ ವಿಭಾಗೀಯ ಉಪಾಧ್ಯಕ್ಷ ಚಂದ್ರಶೇಖರ ಹಿರೇಮಠ ಮತ್ತು ಸಂಘದ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿ, ಶುಭ ಹಾರೈಸಿದ್ದಾರೆ.

# ಜಾಲಹಳ್ಳಿ ಗ್ರಾ.ಪಂ. ಮೀಸಲಾತಿ ಬದಲಾವಣೆಗೆ ಅವಕಾಶವಿಲ್ಲ: ಮರುಪರಿಶೀಲನಾ ಮನವಿಗೆ ಜಿಲ್ಲಾಡಳಿತದ ಹಿಂಬರಹ



ದೇವದುರ್ಗ: ತಾಲೂಕಿನ ಜಾಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರವರ್ಗ2ಬಿ (ಮುಸ್ಲಿಂ) ಸಮುದಾಯಕ್ಕೆ ಸೂಕ್ತ ಮೀಸಲಾತಿ ಕಲ್ಪಿಸುವಂತೆ ಸಲ್ಲಿಸಲಾಗಿದ್ದ ಮರುಪರಿಶೀಲನಾ ಮನವಿಗೆ ಜಿಲ್ಲಾಡಳಿತ ಹಿಂಬರಹ ನೀಡಿದ್ದು, ಪ್ರಸ್ತುತ ಮೀಸಲಾತಿ ಬದಲಾವಣೆಗೆ ಅವಕಾಶವಿಲ್ಲ ಎಂದು ತಿಳಿಸಿದೆ. ಈ ಕುರಿತು ಸಕ್ಷಮ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿ ಪರಿಹಾರ ಕಂಡುಕೊಳ್ಳುವಂತೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

ಜಾಲಹಳ್ಳಿ ಗ್ರಾಮ ಪಂಚಾಯಿತಿಯು ಒಟ್ಟು ಒಂಬತ್ತು ವಾರ್ಡ್‌ಗಳನ್ನು ಹೊಂದಿದ್ದು, ಅವುಗಳಲ್ಲಿ 2, 3, 4 ಹಾಗೂ 5ನೇ ವಾರ್ಡ್‌ಗಳಲ್ಲಿ ಪ್ರವರ್ಗ2ಬಿ ಸಮುದಾಯದ ಮತದಾರರು ಗಣನೀಯ ಸಂಖ್ಯೆಯಲ್ಲಿದ್ದಾರೆ. ಆದರೂ ಪ್ರಕಟಿತ ಮೀಸಲಾತಿ ಪಟ್ಟಿಯಲ್ಲಿ ಸಮುದಾಯಕ್ಕೆ ಸೂಕ್ತ ಪ್ರಾತಿನಿಧ್ಯ ದೊರೆತಿಲ್ಲ ಎಂದು ಜಾಲಹಳ್ಳಿ ನಿವಾಸಿ ಹುಸೇನ್ ಸಾಬ್ ಆಕ್ಷೇಪ ವ್ಯಕ್ತಪಡಿಸಿದ್ದರು.

ಈ ಹಿನ್ನೆಲೆಯಲ್ಲಿ ವಾರ್ಡ್‌ವಾರು ಜನಸಂಖ್ಯೆ, ಮತದಾರರ ವಿವರಗಳು ಹಾಗೂ ಸರ್ಕಾರದ ಮೀಸಲಾತಿ ಮಾರ್ಗಸೂಚಿಗಳನ್ನು ಪರಿಶೀಲಿಸಿ, ಅರ್ಹ ವಾರ್ಡ್‌ಗೆ ಪ್ರವರ್ಗ2ಬಿ ಮೀಸಲಾತಿ ನಿಗದಿಪಡಿಸಬೇಕು. ಅಲ್ಪಸಂಖ್ಯಾತ ಸಮುದಾಯಕ್ಕೆ ನ್ಯಾಯಯುತ ಪ್ರಾತಿನಿಧ್ಯ ಕಲ್ಪಿಸಬೇಕು ಎಂದು ಒತ್ತಾಯಿಸಿ ಆಗಸ್ಟ್ 17ರಂದು ಜಿಲ್ಲಾಡಳಿತಕ್ಕೆ ಮರುಪರಿಶೀಲನಾ ಮನವಿ ಸಲ್ಲಿಸಿದ್ದರು.

ಮನವಿಯನ್ನು ಪರಿಶೀಲಿಸಿರುವ ಜಿಲ್ಲಾಡಳಿತ, 2026ನೇ ಸಾಲಿನ ಗ್ರಾಮ ಪಂಚಾಯಿತಿ ಚುನಾವಣೆಗೆ ಸಂಬಂಧಿಸಿದ ಮೀಸಲಾತಿಯನ್ನು ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳಲ್ಲಿನ ಸ್ಥಾನಗಳನ್ನು ಆವರ್ತನೆಯ ಮೇಲೆ ಮೀಸಲಿಡುವ) ನಿಯಮಗಳು, 1998ರ ಅನ್ವಯ ನಿಗದಿಪಡಿಸಲಾಗುತ್ತಿದೆ ಎಂದು ಹಿಂಬರಹದಲ್ಲಿ ತಿಳಿಸಿದೆ.

ಅರ್ಜಿದಾರರು ಕೋರಿರುವ ರೀತಿಯಲ್ಲಿ ಮೀಸಲಾತಿ ಬದಲಾಯಿಸಲು ಅವಕಾಶವಿಲ್ಲ. ಈ ನಿರ್ಧಾರದ ಕುರಿತು ಆಕ್ಷೇಪವಿದ್ದಲ್ಲಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಕ್ಕೆ ಮೇಲ್ಮನವಿ ಸಲ್ಲಿಸಿ ಪರಿಹಾರ ಪಡೆದುಕೊಳ್ಳಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ. ಅಲ್ಲದೆ, ಸಲ್ಲಿಕೆಯಾಗಿದ್ದ ಮನವಿಯನ್ನು ಈ ಹಂತದಲ್ಲಿ ಮುಕ್ತಾಯಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ.

ಜಿಲ್ಲಾಡಳಿತದ ಈ ಉತ್ತರದಿಂದ ಮೀಸಲಾತಿ ಮರುಪರಿಶೀಲನೆಗೆ ಸಂಬಂಧಿಸಿದ ಮನವಿ ಸದ್ಯಕ್ಕೆ ಇತ್ಯರ್ಥಗೊಂಡಿದ್ದು, ಅರ್ಜಿದಾರರು ಮುಂದಿನ ಹಂತದಲ್ಲಿ ಸಕ್ಷಮ ಪ್ರಾಧಿಕಾರವನ್ನು ಸಂಪರ್ಕಿಸಿ ಕಾನೂನುಬದ್ಧ ಪರಿಹಾರ ಪಡೆಯುವ ಅವಕಾಶವಿದೆ. ಸಮುದಾಯಕ್ಕೆ ಸೂಕ್ತ ಪ್ರಾತಿನಿಧ್ಯ ಕಲ್ಪಿಸಬೇಕೆಂಬ ಬೇಡಿಕೆ ಹಿನ್ನೆಲೆಯಲ್ಲಿ ಜಾಲಹಳ್ಳಿ ಗ್ರಾಮ ಪಂಚಾಯಿತಿ ಮೀಸಲಾತಿ ವಿಚಾರ ಗಮನ ಸೆಳೆದಿದೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K